ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 291 RNI Number : KNKAN/25/A2770 04-11-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ:291 ರಾಯಚೂರು 04-11-2026 ಬುಧವಾರ ಪುಟ 04 ಬೆಲೆ ರೂ.2/- Postal Reg Number:RCR/L/RNP/117/2026-28

ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್‌ನವರನ್ನು ತುಂಡು ತುಂಡು ಮಾಡಿ ಸಮುದ್ರಕ್ಕೆ ಎಸೆಯಲಿದ್ದಾರೆ : ನಾರಾಯಣಸ್ವಾಮಿ

ಕೋಲಾರ,

ಕಾಂಗ್ರೆಸ್ ದೇಶದಲ್ಲಿ ಅರಾಜಕತೆ ಸೃಷ್ಟಿಸಲು ಹೊರಟಿದೆ. ಒಂದು ವೇಳೆ ಇದೇ ರೀತಿ ಮುಂದುವರಿಸಿದ್ದೇ ಆದಲ್ಲಿ, ಬಿಜೆಪಿ ಕಾರ್ಯಕರ್ತರು ಹಾಗೂ ಬೆಂಬಲಿಗರು ಕಾಂಗ್ರೆಸ್ ನವರನ್ನು ತುಂಡು ತುಂಡು ಮಾಡಿ ಅರಬ್ಬಿ ಸಮುದ್ರಕ್ಕೆ ಎಸೆಯಲಿದ್ದಾರೆ ಎಂದು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.



ಎಸ್.ಐ.ಆರ್. ವಿಚಾರದಲ್ಲಿ ಕಾಂಗ್ರೆಸ್ ಹಮ್ಮಿಕೊಂಡಿದ್ದ ಪ್ರತಿಭಟನೆಗೆ ತಿರುಗೇಟು ನೀಡಲು ಕೋಲಾರದಲ್ಲಿ ಬಿಜೆಪಿ ವತಿಯಿಂದ ಆಯೋಜಿಸಲಾಗಿದ್ದ ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ ಪಾದಯಾತ್ರೆಯಲ್ಲಿ ಭಾಗವಹಿಸಿ ಮಾತನಾಡಿದರು.

ಕಾಂಗ್ರೆಸ್ ಪಕ್ಷ ಕೇವಲ ನಮಗಾಗಲಿ ಅಥವಾ ಸರಕಾರಕ್ಕಾಗಲಿ ವಿರೋಧ ಪಕ್ಷವಾಗಿ ಉಳಿದಿಲ್ಲ; ಬದಲಿಗೆ ಇಡೀ ದೇಶಕ್ಕೇ ವಿರೋಧ ಪಕ್ಷವಾಗಿದೆ. ದೇಶದ ವಿರುದ್ಧ ಇರುವವರು ನಮಗೆ ಬೇಕಾಗಿಲ್ಲ. ಪ್ರಸ್ತುತ ದೇಶ ಅತ್ಯಂತ ಸುಭಿಕ್ಷವಾಗಿದೆ ಎಂದರು.

ದೇಶದಲ್ಲಿ ಶಾಂತಿಯನ್ನು ಕಾಪಾಡಬೇಕು ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರ ಕೈಯನ್ನು ಬಲಪಡಿಸಬೇಕು ಎಂದು ಕರೆ ನೀಡಿದ ಅವರು, ಎಸ್.ಐ.ಆರ್. ವಿಚಾರವನ್ನು ಮುಂದಿಟ್ಟುಕೊಂಡು ಜನರಲ್ಲಿ ತಪ್ಪು ಕಲ್ಪನೆ ಮೂಡಿಸುವ ಕೆಲಸವನ್ನು ಕಾಂಗ್ರೆಸ್ ನಿಲ್ಲಿಸಬೇಕು. ಕಾಂಗ್ರೆಸ್ ಅರಾಜಕತೆ ಮುಂದುವರಿಸಿದರೆ ಬಿಜೆಪಿ ಕಾರ್ಯಕರ್ತರು ಸುಮ್ಮನಿರುವುದಿಲ್ಲ ಎಂದರು.

ಈ ಪಾದಯಾತ್ರೆಯಲ್ಲಿ ಬಿಜೆಪಿ ರಾಷ್ಟ್ರೀಯ ಕಾರ್ಯದರ್ಶಿ ಹಾಗೂ ರಾಜ್ಯ ಉಸ್ತುವಾರಿ ಹರೀಶ್ ದ್ವಿವೇದಿ, ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಮಾಜಿ ಸಚಿವರಾದ ಡಾ. ಸಿ.ಎನ್. ಅಶ್ವಥ್ ನಾರಾಯಣ, ಬೈರತಿ ಬಸವರಾಜ ಹಾಗೂ ಕೋಲಾರ ಜಿಲ್ಲಾ ಬಿಜೆಪಿ ಅಧ್ಯಕ್ಷ ಓಂ ಶಕ್ತಿ ಚಲಪತಿ ಸೇರಿದಂತೆ ಹಲವು ಪ್ರಮುಖ ನಾಯಕರು ಭಾಗವಹಿಸಿದ್ದರು.

ರೈತರ ಸಮಸ್ಯೆ ಚರ್ಚೆ: ಡಿಸಿ ದರ್ಪ 48 ಗಂಟೆ ಗಡುವು ಸ್ಪಷ್ಟನೆ ನೀಡಿದಿದ್ದರೆ ಉಪವಾಸ ಸತ್ಯಾಗ್ರಹ ಎಚ್ಚರಿಕೆ

ರಾಯಚೂರು, ನ.03-

ರೈತರ ಬೆಳೆಗಳಿಗೆ ನೀರು ಪೂರೈಕೆ ಹಾಗೂ ಶುದ್ದ ಕುಡಿಯುವ ನೀರು ವಿಚಾರಕ್ಕೆ ಸಂಬಂಧ ಜಿಲ್ಲಾಡಳಿತ ಗಮನಕ್ಕೆ ತರುವ ಸಂದರ್ಭದಲ್ಲಿ ಡಿಸಿ ಅವರು ತನಗೆ ಅಪಮಾನ ಮಾಡಿದ್ದೂ, ಡಿಸಿ ಅವರಿಗೆ 48 ಗಂಟೆ ಗಡುವು ಸ್ಪಷ್ಟನೆ ನೀಡಿದಿದ್ದರೆ ಉಪವಾಸ ಸತ್ಯಾಗ್ರಹ ನಡೆಸಲಾಗುವುದು ಎಂದು ರೈತರ ಪರ ಹೋರಾಟಗಾರ್ತಿ ಅನಿತಾ ನವಲಕಲ್ ಅವರು ಎಚ್ಚರಿಸಿದರು.



ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ, ರೈತ ಬೆಳೆಗೆ ನೀರು ಹಾಗೂ ಸಾರ್ವಜನಿಕರ ಶುದ್ದ ಕುಡಿಯುವ ನೀರು ಪೂರೈಗೆ ಮಾಡುವಲ್ಲಿ ಜಿಲ್ಲಾಡಳಿತ ಸಂಪೂರ್ಣವಾಗಿ ವಿಫಲವಾಗಿದೆ. ಇದನ್ನು ಕೇಳಲು ಜಿಲ್ಲಾಧಿಕಾರಿ ಪೂವಿಕ ಅವರ ಕಛೇರಿಗೆ ಹೋದರೆ ನನ್ನ ಮೇಲೆ ದರ್ಪ ತೊರಿಸಿ ನಿಂದಿಸಿ ಕಛೇರಿಯಿಂದ ಹೊರ ಹಾಕಿದ್ದಾರೆ ಎಂದು ಆರೋಪಿಸಿದರು.

ರೈತ ಪರ ಧ್ವನಿ ಎತ್ತಲು ಹೋದ ನನ್ನ ಮೇಲೆ ಜಿಲ್ಲಾಧಿಕಾರಿಗಳು ದರ್ಪ ತೋರುವುದು ಏಕೆ ಎಂದು ಸ್ಪಷ್ಟನೆ ನೀಡಬೇಕು. ಡಿಸಿ ಅವರಿಗೆ 48 ಗಂಟೆ ಗಡುವು ಹೊರ ಹೋಗುವಂತೆ ಅಪಮಾನ ಮಾಡಿರುವ ಬಗ್ಗೆ ಸ್ಪಷ್ಟನೆ ನೀಡಬೇಕು.

ಮೂರನೇಯ ಪುಟಕ್ಕೆ

ತಿಡಿಗೋಳ: ದಲಿತರಿಗೆ ದೇವಸ್ಥಾನ ಪ್ರವೇಶ: ಸಮಾನತೆಯ ಸಂವಿಧಾನಿಕ ಆಶಯಕ್ಕೆ ಸಾಕ್ಷಿಯಾದ ಐತಿಹಾಸಿಕ ಕ್ಷಣ

ಸಿಂಧನೂರು: ತಾಲೂಕಿನ ತಿಡಿಗೋಳ ಗ್ರಾಮದಲ್ಲಿ ದಲಿತ ಸಮುದಾಯದವರು ದೇವಸ್ಥಾನ ಪ್ರವೇಶಿಸುವ ಮೂಲಕ ಸಾಮಾಜಿಕ ಸಮಾನತೆ ಮತ್ತು ಸೌಹಾರ್ದತೆಯ ಮಹತ್ವವನ್ನು ಸಾರಿದ ಐತಿಹಾಸಿಕ ಕ್ಷಣಕ್ಕೆ



ಇಂದು ಸಾಕ್ಷಿಯಾಯಿತು.

ಭಾರತದ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಪ್ರತಿಪಾದಿಸಿದ ಸಮಾನತೆ, ಸ್ವಾತಂತ್ರ್ಯ, ಸಹೋದರತೆ ಹಾಗೂ ಸಾಮಾಜಿಕ ನ್ಯಾಯದ ಆಶಯಗಳು ಸಮಾಜದಲ್ಲಿ ಸಾಕಾರಗೊಳ್ಳಬೇಕೆಂಬ ನಿಟ್ಟಿನಲ್ಲಿ ತಿಡಿಗೋಳ ಗ್ರಾಮದಲ್ಲಿ ನಡೆದ ಈ ಬೆಳವಣಿಗೆ ಮಹತ್ವ ಪಡೆದುಕೊಂಡಿದೆ.

ಗ್ರಾಮದಲ್ಲಿ ಉಂಟಾಗಿದ್ದ ದೇವಸ್ಥಾನ ಪ್ರವೇಶದ ಸಮಸ್ಯೆಯನ್ನು ಸೌಹಾರ್ದಯುತವಾಗಿ ಬಗೆಹರಿಸುವ ಉದ್ದೇಶದಿಂದ ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದಲ್ಲಿ ಶಾಂತಿ ಸಭೆ ಆಯೋಜಿಸಲಾಗಿತ್ತು. ಸಭೆಯಲ್ಲಿ ಗ್ರಾಮದ ಮುಖಂಡರು, ದಲಿತ ಸಮುದಾಯದ ಪ್ರತಿನಿಧಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ, ಸಾಮಾಜಿಕ ಸಾಮರಸ್ಯ ಮತ್ತು ಶಾಂತಿ ಕಾಪಾಡುವ ಕುರಿತು ಮಹತ್ವದ ನಿರ್ಧಾರಗಳನ್ನು ಕೈಗೊಳ್ಳಲಾಯಿತು.

ಈ ಸಭೆಯ ಫಲವಾಗಿ ದಲಿತ ಸಮುದಾಯದವರಿಗೆ ದೇವಸ್ಥಾನ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಯಿತು. ಹಲವು ವರ್ಷಗಳಿಂದ ಸಾಮಾಜಿಕವಾಗಿ ಎದುರಾಗುತ್ತಿದ್ದ ಅಸಮಾನತೆಯ ಗೋಡೆಯನ್ನು ದಾಟಿ, ಎಲ್ಲರಿಗೂ ಸಮಾನ ಹಕ್ಕು ಮತ್ತು ಗೌರವ ದೊರೆಯಬೇಕೆಂಬ ಸಂವಿಧಾನದ ಆಶಯಕ್ಕೆ ಈ ಘಟನೆ ಸಾಕ್ಷಿಯಾಯಿತು. ದೇವಸ್ಥಾನ ಪ್ರವೇಶಿಸಿದ ದಲಿತ ಸಮುದಾಯದ ಮುಖಗಳಲ್ಲಿ ಕಂಡ ಸಂತೋಷ ಮತ್ತು ಆತ್ಮಗೌರವದ ಭಾವನೆ ಈ ಕ್ಷಣದ ಮಹತ್ವವನ್ನು ಮತ್ತಷ್ಟು ಹೆಚ್ಚಿಸಿತು.

ಇದೇ ಸಂದರ್ಭದಲ್ಲಿ ದಲಿತ

ಮೂರನೇಯ ಪುಟಕ್ಕೆ

ರಿಪೋರ್ಟರ್ಸ್ ಗಿಲ್ಡ್ ನಿಂದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ವೀರ ಹನುಮಾನಗೆ ಸನ್ಮಾನ

ರಾಯಚೂರು,ನ.03-

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಹಿರಿಯ ಸಾಹಿತಿ ವೀರಹನುಮಾನ ಅವರಿಗೆ ರಾಯಚೂರು ರಿಪೋರ್ಟ್ ರ್ಸ್ ಗಿಲ್ಡ್ ನಿಂದ ಸನ್ಮಾನಿಸಿ ಗೌರವಿಸಲಾಯಿತು.



ಪತ್ರಿಕಾ ಭವನದಲ್ಲಿ ಹಮ್ಮಿಕೊಂಡ ಸನ್ಮಾನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಸಾಹಿತಿ ವೀರ ಹನುಮಾನ, ಬರಹಗಾರ ಜನವಾಣಿಗೆ ಬರಲು ಪತ್ರಕರ್ತರು ಮುಖ್ಯ. ಜನರಿಗೆ ಸಾಹಿತ್ಯ ತಲುಪಿಸಿದಾಗ ಮಾತ್ರ ಯಶಸ್ವಿಯಾಗಲು ಸಾಧ್ಯ ಎಂದರು. 1976 ರಿಂದ ಕವನ ಕತೆಗಳ ಮೂಲಕ ರಾಯಚೂರು ವಾಣಿ, ಸುದ್ದಿಮೂಲ ಪತ್ರಿಕೆ ಮೂಲಕ ಬರವಣಿಗೆಯನ್ನು ಆರಂಭಿಸಿದ್ದರಿಂದ ನಮ್ಮನ್ನು ಗುರುತಿಸಲು ಸಾಧ್ಯವಾಗಿದೆ

ಆತ್ಮೀಯತೆ ಇದ್ದಲ್ಲಿ ಅಮೃತತ್ವ ಇರುತ್ತದೆ. ಅಂದಿನಿಂದ ಈ ವರೆಗಿನ ಪತ್ರಕರ್ತರು ಗೌರವ ಕೊಡುತ್ತಾರೆ. ಪ್ರೀತಿಯೇ ರಾಜ್ಯೋತ್ಸವ ಪ್ರಶಸ್ತಿ ಸಿಗಲು ಕಾರಣವಾಗಿದೆ.ಹಾಗಾಗಿ, ಸರ್ಕಾರಕ್ಕೆ ಧನ್ಯವಾದಗಳು ಎಂದರು.

ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷ ವಿಜಯಕುಮಾರ್ ಜಾಗಟಗಲ್ ಮಾತನಾಡಿ ಸಾಧಕರ ಗುರುತಿಸುವ ಕಾರ್ಯ ಎಲ್ಲರೂ ಮಾಡಬೇಕು ಅದು ಜವಾಬ್ದಾರಿ ಎಂದು ಹೇಳಿದರು.

ವೀರ ಹನುಮಾನ ಅವರು ಯುವ ಬರಹಗಾರರಿಗೆ ಪ್ರೋತ್ಸಾಹ ನೀಡುವುದು ಮಾದರಿಯಾಗಿದೆ. ಬೇರೆಯವರಿಗೆ ಸಮಯ ಕೊಡುವ ಮನಸು ಎಲ್ಲರಿಗೂ ಇರದು ಎಂದ ಅವರು ಹೈಕು ಸಾಹಿತ್ಯ ಪ್ರಕಾರವನ್ನು ಕನ್ನಡದಲ್ಲಿ ಪರಿಚಯಿಸಿದ ಮೊದಲಿಗರು ಎಂಬ ಶಾಂತರಸರ ಮಾತು ಮೆಲಕು ಹಾಕಿದ ಅವರು ವೀರಹನುಮಾನ ಅವರಿಗೆ ದೊರೆತ ರಾಜ್ಯೋತ್ಸವ ಪ್ರಶಸ್ತಿ ಜಿಲ್ಲೆಯ ಹೆಮ್ಮೆಯ ವಿಷಯ. ಸಾಹಿತ್ಯ ಕೃಷಿ ಮುಂದುವರಿಯಲಿ ಅವರ ಪ್ರೋತ್ಸಾಹ ಗುಣ ಉಳಿದವರಿಗೆ ಅನುಕರಣೆಯಾಗಲಿ ಎಂದು ಆಶಿಸಿದರು.

ಈ ಸಂದರ್ಭದಲ್ಲಿ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ರಂಗಣ್ಣ ಪಾಟೀಲ ಅಳ್ಳುಂಡಿ, ಪತ್ರಕರ್ತರ

ಮೂರನೇಯ ಪುಟಕ್ಕೆ

12ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಲಾಂಚನ ಬಿಡುಗಡೆ-ಬೋಸರಾಜು

ರಾಯಚೂರು, ನ.03-

ಕನ್ನಡ ಸಾಹಿತ್ಯ ಪರಿಷತ್ತ್ ವತಿಯಿಂದ ಜಿಲ್ಲಾ 12 ನೇ ಕನ್ನಡ ಸಾಹಿತ್ಯ ಸಮ್ಮೇಳನ ನ.14 ಮತ್ತು 15ರಂದು ನಗರದ ರಂಗಮಂದಿರದಲ್ಲಿ ನಡೆಯಲಿದ್ದು, ಸಮ್ಮೇಳನದ ಲಾಂಚನ ಬಿಡುಗಡೆಗೊಳಿಸಲಾಗಿದೆ ಎಂದು ಮಾಜಿ ಸಚಿವರು,ವಿಧಾನಪರಿಷತ್ ಸದಸ್ಯರು ಹಾಗೂ 12ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸ್ವಾಗತ ಸಮಿತಿ ಅಧ್ಯಕ್ಷ ರಾದ ಎನ್.ಎಸ್.ಬೋಸರಾಜ ಹೇಳಿದರು.



ಅವರಿಂದು ನಗರದ ಖಾಸಗೀ ಹೋಟೆಲ್ ನಲ್ಲಿ ಕರೆದ ಲಾಂಚನ ಬಿಡುಗಡೆ ಮಾಡಿ ಸುದ್ದಿಗಾರರೊಂದಿಗೆ ಮಾತನಾಡಿ, ಸಮ್ಮೇಳನದ ಅಧ್ಯಕ್ಷರಾಗಿ ಹಿರಿಯ ಸಾಹಿತಿ ರಾಮಣ್ಣ ಹವಾಳೆಯವರನ್ನು ಆಯ್ಕೆ ಮಾಡಲಾಗಿದೆ.

ಸಮ್ಮೇಳನದ ಉದ್ಘಾಟನೆಯನ್ನು ಸಣ್ಣ ನೀರಾವರಿ ಹಾಗೂ ವಿಜ್ಞಾನ ಹಾಗೂ ತಂತ್ರಜ್ಞಾನ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿಬ ಡಾ.ಅಜಯಸಿಂಗ್ ಧರ್ಮಸಿಂಗ್ ಮಾಡಲಿದಗದ್ದಾರೆ. ಮುಖ್ಯ ಅತಿಥಿಗಳಾಗಿ ಜಿಲ್ಲೆಯ ಶಾಸಕರು,ಸಂಸದರು,ವಿಧಾನಪರಿಷತ ಸದಸ್ಯರು ಸೇರಿದಂತೆ ಜನಪ್ರತಿನಿಧಿಗಳು ಆಗಮಿಸಲಿದ್ದಾರೆ. ಸಾಹಿತಿಗಳು,ಸಾರ್ವಜನಿಕರು ಸಹಕಾರ ನೀಡಿ ಸಮ್ಮೇಳನ ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದರು.

ಸಮ್ಮೇಳನದ ಕಾರ್ಯಾಧ್ಯಕ್ಷರು ಹಾಗೂ ಮಾಜಿ ಶಾಸಕ ಎ.ಪಾಪಾರೆಡ್ಡಿ ಮಾತನಾಡಿ, ಸಮ್ಮೇಳನದ ಯಶಸ್ವಿಗೆ ಶ್ರಮಿಸುವುದಾಗಿ ಹೇಳಿದರು.

ಲಾಂಚನ ತಯಾರಿಸಿದ ವೀರಹನುಮಾನ ಮಾತನಾಡಿ,ಜಿಲ್ಲೆ ಇತಿಹಾಸ, ಸಂಸ್ಕೃತಿ ಬಿಂಬಿಸುವ ಹಾಗೂ ಜಿಲ್ಲೆಯ ಪ್ರಸಿದ್ಧ ತಾಣಗಳನ್ನೊಳಗೊಂಡ ಲಾಂಚನವನ್ನು ತಯಸರಿಸಲಾಗಿದೆ. ಪಿಎಬಿ ಈಶ್ವರ್ ಹಾಗೂ ನಾನು ಲಾಂಚನ ತಯಾರು ಮಾಡಿರುವುದಾಗಿ ತಿಳಿಸಿದ್ದರು.

ಈ ಸಂದರ್ಭದಲ್ಲಿ ಕಸಾಪ ಜಿಲ್ಲಾಧ್ಯಕ್ಷರಾದ ರಂಗಣ್ಣ ಪಾಟೀಲ್ ಅಳಂಡಿ,ಡಾ.ಬಸವಪ್ರಭು ಪಾಟೀಲ್,ಬಾಬು ಬಂಡಾರಿಗಲ್,ಕೆ.ಶಾಂತಪ್ಪ, ತಾಯಪ್ಪ ಹೊಸೂರು,ರಾವತ್ ರಾವ್,ಜಯಣ್ಣ,ಮಂಜುನಾಥ,ನಾಗಪ್ಪ ಹೊರಪೇಟೆ,ಜ.ಶಿವಮೂರ್ತಿ, ಹಾಫೀಜ್ ಉಲಾ,ದಂಡಪ್ಪ ಬಿರಾದರ್ ಉಪಸ್ಥಿತರಿದ್ದರು.



ವಕೀಲರ ಮೇಲಿನ ಹಲ್ಲೆ ಖಂಡಿಸಿ ದೇವದುರ್ಗದಲ್ಲಿ ಪ್ರತಿಭಟನೆ

ರಾಯಚೂರು: ರಾಜ್ಯಾದ್ಯಂತ ವಕೀಲರ ಮೇಲೆ ನಿರಂತರವಾಗಿ ಹತ್ಯೆ, ಹಲ್ಲೆ, ದೌರ್ಜನ್ಯಗಳು ನಡೆಯುತ್ತಿರುವುದನ್ನು ಖಂಡಿಸಿ, ರಾಜ್ಯಾದ್ಯಂತ ನಡೆಯುತ್ತಿರುವ ಹೋರಾಟವನ್ನು ಬೆಂಬಲಿಸಿ, ದೇವದುರ್ಗ ವಕೀಲರ ಸಂಘ ಮಂಗಳವಾರದಂದು ಕೋರ್ಟ ಆವರಣದ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ನ್ಯಾಯಾಲಯದ ಕಲಾಪಗಳಿಂದ ದೂರ ಉಳಿದು ರಾಜ್ಯದ ಮುಖ್ಯಮಂತ್ರಿಗಳಿಗೆ ಬರೆದ ಮನವಿಪತ್ರವನ್ನು ತಹಶೀಲ್ದಾರ ಮುಖಾಂತರ ಸಲ್ಲಿಸಲಾಯಿತು.

ಹಲವು ವರ್ಷಗಳಿಂದ ಜನ ಸಾಮಾನ್ಯರಿಗೆ ನೆರವಾಗುವ ವಕೀಲರ ಮೇಲೆ ನಿರಂತರವಾಗಿ ಹತ್ಯೆ, ಹಲ್ಲೆ, ದೌರ್ಜನ್ಯಗಳು ನಡೆಯುತ್ತಿವೆ. ಇದರಿಂದಾಗಿ ಭಯ ರಹಿತವಾಗಿ ವೃತ್ತಿ ನಡೆಸಲು ಸಾಧ್ಯವಾಗುತ್ತಿಲ್ಲ. ವಿವಿಧ ಕಚೇರಿ ಗಳಿಗೆ ಸಾರ್ವಜನಿಕ ಕೆಲಸ-ಕಾರ್ಯಗಳಿಗಾಗಿ ವಕೀಲರು ಭೇಟಿ ನೀಡಿದಾಗಲೂ ಸರಿಯಾದ ಗೌರವ ಮತ್ತು ಸ್ಪಂದನೆ ಸಿಗುತ್ತಿಲ್ಲವೆಂದು ವಕೀಲರ ಸಂಘದ ಅಧ್ಯಕ್ಷರಾದ ಎಂ.ಮೌನೇಶ್ವರ, ಹಿರಿಯ ನ್ಯಾಯವಾದಿ ವೇಣುಗೋಪಾಲಗೌಡ ಪಾಟೀಲ ಜಾಲಹಳ್ಳಿ ಅವರು ಆರೋಪಿಸಿದರು.

ಬಯಲಾಟ ಹಿರಿಯ ಕಲಾವಿದ ಸಣ್ಣ ವೆಂಕಟೇಶರಿಗೆ ಪ್ರಶಸ್ತಿ ನೀಡಿದಿರುವುದು ದುರಂತ

ರಾಯಚೂರು,ನ.03-ತಾಲೂಕು ಪ್ರದೇಶದಲ್ಲಿ ಕಳೆದ ನಾಲ್ಕೈದು ದಶಕಗಳಿಂದ ಬಯಲಾಟ ಮಾಡಿದ ಹಿರಿಯ ಕಲಾವಿದರು ಸಣ್ಣ ವೆಂಕಟೇಶ ಯಪಲದಿನ್ನಿ ಇವರಿಗೆ ಇದುವರೆಗೂ ಯಾವುದೇ ರಾಜ್ಯ ಮಟ್ಟದ ಪ್ರಶಸ್ತಿಗೆ ಪರಿಗಣಿಸಿದಿರುವುದು ದುರಂತದ ಸಂಗತಿ ಎಂದು ಕಲಾವಿದರು ಅಕ್ಬರ್ ಹುಸೇನ್ ಅವರು ಅಸಮಾಧಾನ ವ್ಯಕ್ತಪಡಿಸಿದರು.



ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ,ಗ್ರಾಮೀಣ ಪ್ರದೇಶದಲ್ಲಿ ಬಯಲಾಟ ಎಂಬುದು ಜೀವಾಳ ಕಲೆಯಾಗಿತ್ತು.ಆದರೆ ಇತ್ತೀಚಿನ ದಿನಗಳಲ್ಲಿ ನಶಿಸಿ ಹೋಗುತ್ತಿದೆ. ಎಲ್ಲಾ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಕಲಾವಿದರನ್ನು ಗುರುತಿಸಿ ರಾಜ್ಯೋತ್ಸವದ ಪ್ರಶಸ್ತಿ ನೀಡಲಾಗಿದೆ. ಬಯಲಾಟವು ಗ್ರಾಮೀಣ ಪ್ರದೇಶದ ಸಾಂಸ್ಕೃತಿಕ ಜೀವಾಳ ಮತ್ತು ಅತ್ಯಂತ ಸೊಗಸಾದ ಜಾನಪದ ಕಲೆ ನಗರದ ಮನರಂಜನೆಗಳಿಗಿಂತ ಭಿನ್ನವಾಗಿ, ಹಳ್ಳಿಗಳ ಮುಕ್ತ ವಾತಾವರಣದಲ್ಲಿ ರಾತ್ರಿಯಿಡೀ ನಡೆಯುವ ಬಯಲಾಟ ತರುವ ಆನಂದವೇ ಅನನ್ಯವಾದುದು. ಸಣ್ಣ ವೆಂಕಟೇಶ ಅವರು ಅನೇಕ ವರ್ಷಗಳಿಂದ ಗ್ರಾಮೀಣ ಪ್ರದೇಶದಲ್ಲಿ ಬಯಲಾಟ ಕಲೆಯನ್ನು ಜೀವಂತ ಉಳಿಸಿದ್ದಾರೆ.

ರಾಜಕೀಯ ಕುತಂತ್ರದಿಂದ ಬಯಲಾಟ ಕಲಾವಿದರಿಗೆ ಪ್ರಶಸ್ತಿ ದೊರೆತಿಲ್ಲ ಎಂದು ಆರೋಪಿಸಿದರು.

ಗ್ರಾಮೀಣ ಭಾಗದ ಜೀವಾಳ ಬಯಲಾಟಕ್ಕೆ ಇದುವರೆಗೂ ಒಂದೇ ಒಂದು ಪ್ರಶಸ್ತಿ ನೀಡಿದಿರುವುದು ದುರಂತ ಸಂಗತಿ. ಹಿರಿಯರು ಪಾರಂಪರಿಕವಾಗಿ ಮತ್ತು ಸಾಂಸ್ಕೃತಿಕವಾಗಿ ನಮಗೆ ಬಳುವಳಿಯಾಗಿ ನೀಡಿದ ಬಯಲಾಟದ ಕಲೆಗೆ ಅಪಾರವಾದ ಮಹತ್ವವಿದೆ. ಇದು ನಮ್ಮ ಮಣ್ಣಿನ ಜೀವಂತ ಸಂಸ್ಕೃತಿಯಾಗಿದ್ದು, ಇದನ್ನು ಮುಂದಿನ ಪೀಳಿಗೆಗೆ ಪರಿಚಯಿಸಿ ಬೆಳೆಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಬಯಲಾಟ ಎಂಬುವುದು ಕೇವಲ ಒಂದು ಪ್ರದರ್ಶನವಲ್ಲ, ಅದು ಹತ್ತು ಹಲವಾರು ಕಲೆಗಳ ಸುಂದರ ಸಂಗಮವಾಗಿದೆ.ಇತ್ತೀಚಿನ ದಿನಮಾನದಲ್ಲಿ ಬಯಲಾಟ ನಶಿಸಿ ಹೋಗುತ್ತದೆ. ಬಯಲಾಟ ಕಲಾವಿದರು ಇದುವರೆಗೂ ಮಾಸಶನ ಇಲ್ಲ. ಕಲಾವಿದರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಸಂಗಮೇಶ ಕುರುಮಯ್ಯ, ಕೊಂಡಯ್ಯ,ಸೇರಿದಂತೆ ಉಪಸ್ಥಿತರಿದ್ದರು.

ದಿನ್ನಿಯವರ ಜಿಲ್ಲಾ ರಾಜೋತ್ಸವ ಪ್ರಶಸ್ತಿ ಜಿಲ್ಲಾ ಕಲಾವಿದರಿಗೆ ಹೆಮ್ಮೆಯ ಕಿರಿಟ



ರಘುಪತಿ ಪೂಜಾರ್ ದಿನ್ನಿ ಇವರು ತಾಲೂಕಿನ ದಿನ್ನಿ ಗ್ರಾಮದ ರೈತ ಕುಟುಂಬದ ಪೂಜಾರ್ ಮನೆತನದ ಸುಭದ್ರಮ್ಮ ಪೂಜಾರ್, ಕೃಷ್ಣಯ್ಯ ಸ್ವಾಮಿ ಈ ಪುಣ್ಯ ದಂಪತಿಗಳ ಪ್ರೀತಿಯ ಪುತ್ರ ಇವರು ಹಿಂದುಸ್ತಾನಿ ಶಾಸ್ತ್ರೀಯ ಸಂಗೀತ ಕ್ಲಾರಿಯೋನೆಟ್ ವಾದನದಲ್ಲಿ ಸಂಗೀತ ವಿಶಾರದ ಮತ್ತು ಅಲಂಕಾರ ಪದವಿಯನ್ನು ಪಡೆದಿದ್ದಾರೆ, ಕಲಬುರ್ಗಿ ಆಕಾಶವಾಣಿ ಹಾಗೂ ದೂರದರ್ಶನದ ಬಿ.ಐ. ಪದವಿ ಕಲಾವಿದರಾಗಿದ್ದಾರೆ,

ನಗರದ ಪಂ. ಸಿದ್ದರಾಮು ಜಂಬಲದಿನ್ನಿ ಸ್ಮಾರಕ ಸ್ವರಸಂಗಮ ಸಂಗೀತ ವಿದ್ಯಾ ಸಂಸ್ಥೆಯಲ್ಲಿ ಅಂತರರಾಷ್ಟ್ರೀಯ ಕ್ಲ್ಯಾರಿಯೋನೆಟ್ ವಾದಕರಾದ ಡಾ.ಪಂ. ನರಸಿಂಹಲು ವಡವಾಟೀಜಿಯವರಲ್ಲಿಯೂ ಸಂಗೀತ ಶಿಕ್ಷಣ ಪಡೆದವರಾಗಿದ್ದಾರೆ.



ಇವರು ನಾಡಿನ ಹೆಸರಾಂತ ಸಂಗೀತ ವೇದಿಕೆಗಳಾದ ಮೈಸೂರು ದಸರಾ ಉತ್ಸವ, ಹಂಪಿ ಉತ್ಸವ,ಕದಂಬ ಉತ್ಸವ,ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಗಳಲ್ಲಿ, ವರ್ಲ್ಡ್ ಕಲ್ಚರಲ್ ಫೆಸ್ಟಿವಲ್ ದೆಹಲಿ, ಮಂತ್ರಾಲಯ ರಾಘವೇಂದ್ರ ಸ್ವಾಮಿಗಳ ಆರಾಧನ ಮಹೋತ್ಸವಗಳಲ್ಲಿ,ಹೈದರಾಬಾದ್ ಮಾಣಿಕ್ ಪ್ರಭು ಸಂಸ್ಥಾನದಲ್ಲಿ , ಬಾಂಬೆ, ಕಲ್ಕತ್ತಾ,ಚೆನ್ನೈ,ಬೆಂಗಳೂರು, ಶೃಂಗೇರಿ, ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಡೆಸುವ ಅನೇಕ ಸರ್ಕಾರದ

ಮೂರನೇಯ ಪುಟಕ್ಕೆ

ಹಾಲಿನ ದರ, ಬಸ್ ಪ್ರಯಾಣ ದರ ಏರಿಕೆ ಖಂಡಿಸಿ ಎಸ್‌ಯುಸಿಐ (ಸಿ) ಪ್ರತಿಭಟನೆ

ಕಲಬುರಗಿ:

ರಾಜ್ಯ ಸರ್ಕಾರ ಹಾಲಿನ ದರವನ್ನು ಲೀಟರ್‌ಗೆ 8 ರೂ. ನಿಂದ 12 ರೂ. ರವರೆಗೆ ಹೆಚ್ಚಿಸಿರುವುದನ್ನು ಹಾಗೂ ಬಸ್ ಪ್ರಯಾಣ ದರ ಏರಿಕೆಯ ಪ್ರಸ್ತಾವನೆಯನ್ನು ಖಂಡಿಸಿ ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) ಪಕ್ಷದ ವತಿಯಿಂದ ಸೋಮವಾರ ನಗರದ ಎಸ್.ವಿ.ಪಿ. ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಬರಗಾಲ ಹಾಗೂ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನರು ತತ್ತರಿಸಿರುವ ಸಂದರ್ಭದಲ್ಲಿ ಸರ್ಕಾರ ಹಾಲಿನ ದರ ಹೆಚ್ಚಿಸಿರುವುದು ಸರಿಯಲ್ಲ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು. ಬೆಲೆ ಏರಿಕೆಯಿಂದ ಸಂಕಷ್ಟದಲ್ಲಿರುವ ಹೈನುಗಾರರ ಸಮಸ್ಯೆಗಳನ್ನು ಪರಿಹರಿಸಲು ಪರ್ಯಾಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪಕ್ಷದ ಜಿಲ್ಲಾ ಸಮಿತಿಯ ಹಿರಿಯ ಸದಸ್ಯೆ ಕಾ.ವಿ.ನಾಗಮ್ಮಾಳ್ ಮಾತನಾಡಿ, ಮುಂಬರುವ ಪಂಚಾಯಿತಿ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಕರ್ನಾಟಕ ಹಾಲು ಒಕ್ಕೂಟದ ರಾಜಕೀಯ ಹಿನ್ನೆಲೆಯ ಪದಾಧಿಕಾರಿಗಳು ಗ್ರಾಮೀಣ ಹೈನುಗಾರರಿಗೆ ಬೆಂಬಲ ನೀಡುವ ಹೆಸರಿನಲ್ಲಿ ಇಂತಹ ಒತ್ತಾಯ ಮಾಡಿದ್ದಾರೆ ಎಂಬುದು ಸ್ಪಷ್ಟವಾಗಿದೆ. ಸರ್ಕಾರ ಹಾಲು ಉತ್ಪಾದಕರು ಮತ್ತು ಗ್ರಾಹಕರು ಇಬ್ಬರ ಹಿತವನ್ನೂ ಪರಿಗಣಿಸಬೇಕು. ಮೇವು, ಪಶು ಆಹಾರ ಸೇರಿದಂತೆ ಅಗತ್ಯ ವಸ್ತುಗಳನ್ನು ರಿಯಾಯಿತಿ ದರದಲ್ಲಿ ಪೂರೈಸಬೇಕು. ಕೆಎಂಎಫ್‌ನಲ್ಲಿನ ದುಂದುವೆಚ್ಚಕ್ಕೆ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿದರು.

ಉತ್ಪಾದನಾ ವೆಚ್ಚವನ್ನು ಕಡಿಮೆ ಮಾಡುವ ಬದಲು ದರ



ಹೆಚ್ಚಳವನ್ನೇ ಪರಿಹಾರವೆಂದು ಭಾವಿಸಿದರೆ ಜನರು ಹಣದುಬ್ಬರದ ವಿಷಚಕ್ರಕ್ಕೆ ಸಿಲುಕಲಿದ್ದಾರೆ ಎಂದು ಎಚ್ಚರಿಸಿದ ಅವರು, ಹಾಲು ಮಕ್ಕಳೂ ಸೇರಿದಂತೆ ಎಲ್ಲರಿಗೂ ಅಗತ್ಯವಾದ ಪೌಷ್ಟಿಕ ಆಹಾರವಾಗಿದೆ. ಆದ್ದರಿಂದ ಸರ್ಕಾರ ತಕ್ಷಣ ಹಾಲಿನ ದರ ಏರಿಕೆ ನಿರ್ಧಾರದಿಂದ ಹಿಂದೆ ಸರಿಯಬೇಕು ಎಂದು ಒತ್ತಾಯಿಸಿದರು. ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ದುಂದುವೆಚ್ಚ ಕಡಿತಗೊಳಿಸಬೇಕು ಮತ್ತು ದೊಡ್ಡ ಬಂಡವಾಳಗಾರರ ಸಾಲ ಮನ್ನಾ ಮಾಡುವುದನ್ನು ನಿಲ್ಲಿಸಬೇಕು ಎಂದೂ ಆಗ್ರಹಿಸಿದರು.

ಪಕ್ಷದ ಜಿಲ್ಲಾ ಸಮಿತಿ ಸದಸ್ಯ ಕಾ. ಜಗನ್ನಾಥ ಎಸ್.ಎಚ್. ಮಾತನಾಡಿ, ನವೆಂಬರ್ 4ರಂದು ಬಸ್ ಪ್ರಯಾಣ ದರವನ್ನು ಶೇ. 40ರಷ್ಟು ಹೆಚ್ಚಿಸುವ ಕುರಿತು ತೀರ್ಮಾನ ಕೈಗೊಳ್ಳಲಾಗುವುದು ಎಂದು ರಾಜ್ಯ ಸರ್ಕಾರ ತಿಳಿಸಿದೆ. ಇದು ಅತ್ಯಂತ ಜನವಿರೋಧಿ ನಿಲುವಾಗಿದೆ. ಜನಸಾಮಾನ್ಯರು ಈಗಾಗಲೇ ಅಗತ್ಯ ವಸ್ತುಗಳು ಹಾಗೂ ಆಹಾರಧಾನ್ಯಗಳ ಬೆಲೆ ಏರಿಕೆಯಿಂದ ತೀವ್ರ ಸಂಕಷ್ಟದಲ್ಲಿದ್ದಾರೆ. ಆದ್ದರಿಂದ ಬಸ್ ಪ್ರಯಾಣ ದರವನ್ನು ಯಾವುದೇ ಕಾರಣಕ್ಕೂ ಹೆಚ್ಚಿಸಬಾರದು ಮತ್ತು ಹಾಲಿನ ದರ ಏರಿಕೆಯನ್ನು ತಕ್ಷಣ ವಾಪಸ್ ಪಡೆಯಬೇಕು ಎಂದು ಆಗ್ರಹಿಸಿದರು.

ಕಾ. ಹಣಮಂತ ಎಸ್.ಎಚ್. ಪ್ರತಿಭಟನೆಯ ಅಧ್ಯಕ್ಷತೆ ವಹಿಸಿದ್ದರು. ಪಕ್ಷದ ಜಿಲ್ಲಾ ನಾಯಕರಾದ ಎಸ್.ಎಂ. ಶರ್ಮಾ, ಡಾ. ಸೀಮಾ, ಮಹೇಶ್ ಎಸ್.ಬಿ., ಸಂದೀಪ, ಸಂತೋಷ ಹಿರೇ, ರಾಧಾ, ತುಳಜಾರಾಮ, ವೆಂಕಟೇಶ ದೇವದುರ್ಗಾ, ಪ್ರೀತಿ ದೊಡ್ಡಮನಿ, ಈಶ್ವರ, ರಮೇಶ ದೇವಕರ, ವಿಶಾಲಾಕ್ಷಿ ಪಾಟೀಲ, ಶಿವರಾಜ, ಸಾಬಮ್ಮ, ಭೀಮು ಆಂದೋಲಾ ಸೇರಿದಂತೆ ಪಕ್ಷದ ಕಾರ್ಯಕರ್ತರು ಹಾಗೂ ನಾಗರಿಕರು ಪ್ರತಿಭಟನೆಯಲ್ಲಿ ಪಾಲ್ಗೊಂಡು, ಸರ್ಕಾರ ದರ ಏರಿಕೆ ನಿರ್ಧಾರವನ್ನು ಕೈಬಿಡಬೇಕೆಂದು ಆಗ್ರಹಿಸಿದರು.



ಆಡಳಿತ ಭಾಷೆಯಾಗಿ ಕನ್ನಡ ಕಡ್ಡಾಯ ಬಳಕೆಯಾಗಲಿ: ಶ್ರೀಶೈಲ ಬಿರಾದರ

ಕಲಬುರಗಿ:

ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದ್ದು, ದೇಶದ ಶ್ರೀಮಂತ ಭಾಷೆಗಳಲ್ಲಿ ಒಂದಾಗಿದೆ. ಹಿಂದಿ ನಂತರ ಅತಿ ಹೆಚ್ಚು ಜ್ಞಾನಪೀಠ ಪ್ರಶಸ್ತಿಗಳನ್ನು ಪಡೆದ ಭಾಷೆ ಕನ್ನಡ ಎಂಬುದು ಹೆಮ್ಮೆಯ ಸಂಗತಿ. ಇತರ ಭಾಷೆಗಳನ್ನು ಗೌರವಿಸುತ್ತಲೇ ನಮ್ಮ ಕನ್ನಡ ಭಾಷೆಯನ್ನು ಮತ್ತಷ್ಟು ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಡಯಟ್ ಪ್ರಾಂಶುಪಾಲರು ಹಾಗೂ ಉಪನಿರ್ದೇಶಕ (ಅಭಿವೃದ್ಧಿ) ಶ್ರೀಶೈಲ ಬಿರಾದರ ಹೇಳಿದರು.

ನಗರದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್)ಯಲ್ಲಿ ರವಿವಾರ ಆಯೋಜಿಸಿದ್ದ 71ನೇ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಅನೇಕ ಸಾಹಿತಿಗಳು ತಮ್ಮ ಅಮೂಲ್ಯ ಕೊಡುಗೆಗಳ ಮೂಲಕ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದಾರೆ. ಕನ್ನಡ ಭಾಷೆಯ ಉಳಿವು ಮತ್ತು ಬೆಳವಣಿಗೆಗೆ ಎಲ್ಲರೂ ಕೈಜೋಡಿಸಬೇಕು. ವಿಶೇಷವಾಗಿ ಆಡಳಿತ ಭಾಷೆಯಾಗಿ ಕನ್ನಡವನ್ನು ಪ್ರತಿಯೊಬ್ಬರೂ ಕಡ್ಡಾಯವಾಗಿ ಬಳಸಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಕಲಬುರಗಿ ದಕ್ಷಿಣ ಕ್ಷೇತ್ರ ಶಿಕ್ಷಣಾಧಿಕಾರಿ ವಿಜಯಕುಮಾರ ಜಮಖಂಡಿ, ಹಿರಿಯ ಉಪನ್ಯಾಸಕರಾದ ಚಂದ್ರಶೇಖರಗೌಡ ಪಾಟೀಲ, ಕಮಲಾ ಕುಲಕರ್ಣಿ, ಹಣಮಂತ ರಾಥೋಡ್, ಸುಧಾರಾಣಿ, ಅಂಬರೀಶ್ ಕಾಂಬಳೆ, ಸಂಸ್ಥೆಯ ಎಲ್ಲ ಉಪನ್ಯಾಸಕರು, ಇಎಲ್‌ಟಿಸಿ ವಿಭಾಗದ ಬೋಧಕರು, ಬೋಧಕೇತರ ಸಿಬ್ಬಂದಿ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯ ಸಿಬ್ಬಂದಿ ಹಾಗೂ ಪ್ರಶಿಕ್ಷಣಾರ್ಥಿಗಳು ಭಾಗವಹಿಸಿದ್ದರು.

ಎಸ್‌ಐಆರ್ ವಿರುದ್ಧ ಕಾಂಗ್ರೆಸ್ ಅಪಪ್ರಚಾರ: ಮಾಜಿ ಸಚಿವ ಸುನೀಲ್ ಕುಮಾರ್ ಆರೋಪ

ಕಲಬುರಗಿ:

ಇಷ್ಟು ದಿನ ಇವಿಎಂ ಸರಿಯಿಲ್ಲ ಎಂದು ಆರೋಪಿಸುತ್ತಿದ್ದ ಕಾಂಗ್ರೆಸ್, ಈಗ ಎಸ್‌ಐಆರ್ ಸರಿಯಿಲ್ಲ ಎಂದು ಹೇಳುವ ಮೂಲಕ ಜನರನ್ನು ದಾರಿ ತಪ್ಪಿಸುತ್ತಿದೆ. ಚುನಾವಣಾ ಆಯೋಗ ಕಾನೂನುಬದ್ಧವಾಗಿ ಕಾರ್ಯನಿರ್ವಹಿಸುತ್ತಿದ್ದು, ಕಾಂಗ್ರೆಸ್ ಕಾನೂನಿನ ಚೌಕಟ್ಟನ್ನು ಮೀರಿ ನಡೆದುಕೊಳ್ಳುತ್ತಿದೆ ಎಂದು ಮಾಜಿ ಸಚಿವ ಸುನೀಲ್ ಕುಮಾರ್ ಆರೋಪಿಸಿದರು.



ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ. 9ರಿಂದ 30ರವರೆಗೆ ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ ಎಂಬ ಘೋಷವಾಕ್ಯದೊಂದಿಗೆ ಯುವ ಸಂವಾದ ಅಭಿಯಾನ ಹಮ್ಮಿಕೊಳ್ಳಲಾಗಿದೆ. ರಾಜ್ಯದ ಸುಮಾರು 100 ಕಾಲೇಜುಗಳ ವಿದ್ಯಾರ್ಥಿಗಳು ಸೇರಿದಂತೆ 30 ವರ್ಷದೊಳಗಿನ ಯುವಜನರೊಂದಿಗೆ ಸಂವಾದ ನಡೆಸಿ, ಕಾಂಗ್ರೆಸ್ ಸರ್ಕಾರದ ದುರಾಡಳಿತ ಹಾಗೂ ಎಸ್‌ಐಆರ್ ವಿಚಾರದಲ್ಲಿ ಕಾಂಗ್ರೆಸ್ ನಡೆಸುತ್ತಿದೆ ಎನ್ನಲಾದ ಹುನ್ನಾರಗಳನ್ನು ಜನರಿಗೆ ತಿಳಿಸಲಾಗುವುದು ಎಂದರು.

ಸಂಸದ ತೇಜಸ್ವಿ ಸೂರ್ಯ ಅವರು ಹುಬ್ಬಳ್ಳಿಯಲ್ಲಿ ಅಭಿಯಾನಕ್ಕೆ ಚಾಲನೆ ನೀಡಲಿದ್ದು, ಬೆಂಗಳೂರಿನಲ್ಲಿ ಬಿಜೆಪಿ ರಾಷ್ಟ್ರೀಯ ವಕ್ತಾರ ಸಂಬಿತ್ ಪಾತ್ರ, ಕಾರ್ಯಕ್ರಮ ನಡೆಸಿಕೊಡಲಿದ್ದಾರೆ. ರಾಜ್ಯದ 500 ಸ್ಥಳಗಳಲ್ಲಿ ಅಭಿಯಾನ ನಡೆಯಲಿದೆ ಎಂದು ತಿಳಿಸಿದರು.

ಸ್ಟಿಂಗ್ ಆಪರೇಷನ್ ಪ್ರಕರಣದ ಸತ್ಯ ಹೊರಬರಲಿ : ಸ್ಟಿಂಗ್ ಆಪರೇಷನ್ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಪೊಲೀಸ್ ಆಯುಕ್ತರು ನೀಡಿರುವ ಹೇಳಿಕೆಗಳ ಹಿಂದಿನ ಸತ್ಯ ಹೊರಬರಬೇಕು. ಪ್ರಕರಣದ ತನಿಖೆ ಸರಿಯಾದ ಮಾರ್ಗದಲ್ಲಿ ನಡೆಯಬೇಕು ಎಂದು ಅವರು ಆಗ್ರಹಿಸಿದರು.

ಜನಾದೇಶದ ಮೂಲಕವೇ ರಾಜಕೀಯ ಪಕ್ಷಗಳ ಸೋಲು-ಗೆಲುವು ನಿರ್ಧಾರವಾಗಬೇಕು. ಸ್ಟಿಂಗ್ ಆಪರೇಷನ್ ಅಥವಾ ಅನೈತಿಕ ಮಾರ್ಗಗಳ ಮೂಲಕ ರಾಜಕೀಯ ಫಲಿತಾಂಶ ನಿರ್ಧರಿಸುವ ಪ್ರಯತ್ನ ನಡೆಯಬಾರದು ಎಂದರು.

ಸ್ಟಿಂಗ್ ಆಪರೇಷನ್ ವಿಡಿಯೊ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರ ನಿವಾಸದಿಂದ ಅಪ್‌ಲೋಡ್ ಆಗಿರುವ ಕುರಿತು ಅವರೇ ಉತ್ತರಿಸಬೇಕು. ತನಿಖೆ ಸರಿಯಾಗಿ ನಡೆದರೆ ಸ್ವಾಗತಿಸುತ್ತೇವೆ. ಇಲ್ಲದಿದ್ದರೆ ಪ್ರಶ್ನಿಸುತ್ತೇವೆ. ಧರ್ಮಸ್ಥಳ ಪ್ರಕರಣದ ತನಿಖೆ ಇನ್ನೂ ಪೂರ್ಣಗೊಂಡಿಲ್ಲ. ಆದರೆ, ಸ್ಟಿಂಗ್ ಪ್ರಕರಣದಲ್ಲಿ ಒಂದು ವಾರದಲ್ಲೇ ತನಿಖೆ ನಡೆಯುತ್ತಿರುವುದು ಗಮನಾರ್ಹ. ತನಿಖೆ ಪಾರದರ್ಶಕವಾಗಿ ನಡೆಯಬೇಕು ಎಂದು ಹೇಳಿದರು.

ರೈತರ ಪರಿಹಾರ ವಿತರಣೆಯಲ್ಲಿ ಷರತ್ತುಗಳ ಆರೋಪ : ಬರಗಾಲದ ಹಿನ್ನೆಲೆಯಲ್ಲಿ ಬಿಜೆಪಿ ತಂಡಗಳು ರಾಜ್ಯದ ವಿವಿಧೆಡೆ ಪ್ರವಾಸ ನಡೆಸಿದ್ದು, ಪಕ್ಷದ ರಾಜ್ಯಾಧ್ಯಕ್ಷರು ಸ್ವತಃ ಹತ್ತು ದಿನಗಳ ಕಾಲ ಪಾದಯಾತ್ರೆ ನಡೆಸಿದ್ದಾರೆ. ರೈತರಿಗೆ ಪರಿಹಾರ ನೀಡುವ ವಿಚಾರದಲ್ಲಿ ರಾಜ್ಯ ಸರ್ಕಾರ ಹಲವು ಷರತ್ತುಗಳನ್ನು ವಿಧಿಸಿದೆ ಎಂದು ಆರೋಪಿಸಿದರು.

ರೈತರಿಗೆ 2,500 ರೂ. ಪರಿಹಾರ ನೀಡಲು ಜಂಟಿ ಜಮೀನು, ಒತ್ತುವರಿ ಹಾಗೂ ಸಾಲ ಮರುಪಾವತಿಯಂತಹ ಷರತ್ತುಗಳನ್ನು ವಿಧಿಸಲಾಗಿದೆ. ಇವುಗಳನ್ನು ಪೂರೈಸಲು ಸಾಧ್ಯವಾಗದ ರೈತರಿಗೆ ಪರಿಹಾರ ಸಿಗದಂತಾಗಿದೆ ಎಂದು ದೂರಿದರು.

ಕಳೆದ ಮೂರು ವರ್ಷಗಳಿಂದ ಹಾಲಿನ ದರವನ್ನು 17 ರೂ. ಹೆಚ್ಚಿಸಲಾಗಿದೆ. ಜೂನ್‌ನಿಂದ ಹಾಲಿನ ಮೇಲಿನ ಸಬ್ಸಿಡಿಯನ್ನೂ ಇನ್ನೂ ನೀಡಿಲ್ಲ. ಮತ್ತೊಮ್ಮೆ ದರ ಏರಿಕೆ ಮಾಡುವ ಮೂಲಕ ಜನಸಾಮಾನ್ಯರ ಮೇಲೆ ಬೆಲೆ ಏರಿಕೆಯ ಹೊರೆ ಹಾಕಲಾಗುತ್ತಿದೆ ಎಂದು ಟೀಕಿಸಿದರು.

ಗ್ಯಾರಂಟಿ ಯೋಜನೆಗಳ ಪರಿಷ್ಕರಣೆಗೆ ಆಕ್ಷೇಪ : ಗ್ಯಾರಂಟಿ ಯೋಜನೆಗಳ ಮೂಲಕ ಎಲ್ಲರಿಗೂ ಸಮಾನವಾಗಿ ಸೌಲಭ್ಯ ನೀಡುವುದಾಗಿ ಹೇಳಿದ್ದ ಕಾಂಗ್ರೆಸ್, ನಂತರ ಷರತ್ತುಗಳನ್ನು ವಿಧಿಸಿತ್ತು. ಈಗ ಪರಿಷ್ಕರಣೆಯ ಹೆಸರಿನಲ್ಲಿ ಗ್ಯಾರಂಟಿ ಯೋಜನೆಗಳನ್ನು ಸ್ಥಗಿತಗೊಳಿಸುವ ಪ್ರಯತ್ನ ನಡೆಸುತ್ತಿದೆ ಎಂದು ಅವರು ಆರೋಪಿಸಿದರು. ಗ್ಯಾರಂಟಿ ಯೋಜನೆಗಳನ್ನು ಪರಿಷ್ಕರಿಸಬಹುದು, ಆದರೆ ಎಸ್‌ಐಆರ್ ಮಾಡಬಾರದು ಎಂಬ ಕಾಂಗ್ರೆಸ್‌ನ ನಿಲುವು ದ್ವಂದ್ವದಿಂದ ಕೂಡಿದೆ ಎಂದು ಟೀಕಿಸಿದರು.

ಸುದ್ದಿಗೋಷ್ಠಿಯಲ್ಲಿ ಶಾಸಕ ಡಾ. ಅವಿನಾಶ್ ಜಾಧವ್, ಮಾಜಿ ಸಂಸದ ಉಮೇಶ್ ಜಾಧವ್, ಸುಭಾಷ್ ಗುತ್ತೇದಾರ್ ಬಿಜೆಪಿ ಜಿಲ್ಲಾಧ್ಯಕ್ಷ ಚಂದು ಪಾಟೀಲ್, ಶರಣಪ್ಪ ತಳವಾರ್ ನಿತಿನ್ ಗುತ್ತೇದಾರ್ ಅವಣ ಮ್ಯಾಕೇರಿ, ಶೋಭಾ ಭರಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕನ್ನಡ ನಾಡು-ನುಡಿ ಗೌರವಿಸೋಣ, ನೆಲ-ಜಲ ಸಂರಕ್ಷಿಸೋಣ: ಶಾಸಕ ಎಂ.ವೈ. ಪಾಟೀಲ್

ಕಲಬುರಗಿ;

ಕನ್ನಡ ಭಾಷೆಯ ಮೇಲೆ ಪ್ರತಿಯೊಬ್ಬರಿಗೂ ಅಭಿಮಾನ ಇರಬೇಕು. ಆದರೆ ಯಾವುದೇ ಭಾಷೆಯನ್ನು ಅವಹೇಳನ ಮಾಡಬಾರದು. ಕನ್ನಡ ಸಂಸ್ಕೃತಿ ಎಲ್ಲ ಭಾಷೆಗಳನ್ನು ಗೌರವಿಸುವ ವಿಶಾಲ ಮನೋಭಾವ ಹೊಂದಿದೆ ಎಂದು ಶಾಸಕ ಎಂ.ವೈ. ಪಾಟೀಲ್ ಹೇಳಿದರು.

ಅಫಜಲಪುರ ಪಟ್ಟಣದ ಸರಕಾರಿ ಪ್ರೌಢಶಾಲೆ ಆವರಣದ ಗುರುಭವನದಲ್ಲಿ ತಾಲೂಕು ಆಡಳಿತದ ವತಿಯಿಂದ ನಡೆದ 71ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ, ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕನ್ನಡ ನಾಡು, ನುಡಿ ಹಾಗೂ ಭಾಷೆಯನ್ನು ಗೌರವಿಸುವುದರ ಜೊತೆಗೆ ನಮ್ಮ ನೆಲ-ಜಲವನ್ನು ಸಂರಕ್ಷಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಕನ್ನಡ ಭಾಷೆಗೆ ಪ್ರಾಚೀನ ಇತಿಹಾಸ ಹಾಗೂ ಶ್ರೀಮಂತ ಪರಂಪರೆ ಇದ್ದು, ಸಾಹಿತ್ಯ, ಕಲೆ ಮತ್ತು ಸಂಸ್ಕೃತಿಯ ಬೆಳವಣಿಗೆಗೆ ಎಲ್ಲರೂ ಕೈಜೋಡಿಸಬೇಕು, ಎಂದು ಹೇಳಿದರು.

ಕನ್ನಡ ಯಾವುದೇ ಭಾಷೆಗಿಂತ ಕಡಿಮೆಯಲ್ಲ. ಇತರ ಭಾಷೆಗಳನ್ನೂ ಗೌರವಿಸುವ ಗುಣ ಕನ್ನಡ ಸಂಸ್ಕೃತಿಯಲ್ಲಿದೆ. ಭಾಷೆಯ ಹೆಸರಿನಲ್ಲಿ ಭೇದಭಾವ ಮಾಡದೆ ಕನ್ನಡದ ಹಿರಿಮೆಯನ್ನು ಹೆಚ್ಚಿಸುವ ಕೆಲಸ ಮಾಡಬೇಕು ಎಂದರು.

ಮಹಾರಾಷ್ಟ್ರ ರಾಜ್ಯದಲ್ಲಿರುವ ಕನ್ನಡ ಶಾಲೆಗಳ ಉಳಿವಿಗಾಗಿ ಕರ್ನಾಟಕ ಸರ್ಕಾರ ಹೆಚ್ಚಿನ ಉತ್ತೇಜನ ಹಾಗೂ ಅಗತ್ಯ ನೆರವು ನೀಡಬೇಕು ಎಂದು ಇದೇ ಸಂದರ್ಭದಲ್ಲಿ ಒತ್ತಾಯಿಸಿದರು.

ತಹಶೀಲ್ದಾರ್ ಸಂಜೀವಕುಮಾರ್ ದಾಸರ ಮಾತನಾಡಿ, ರಾಜ್ಯದಲ್ಲಿ ಬರಗಾಲದ ಪರಿಸ್ಥಿತಿ ಇರುವ ಹಿನ್ನೆಲೆಯಲ್ಲಿ ಈ ಬಾರಿ ಕನ್ನಡ ರಾಜ್ಯೋತ್ಸವವನ್ನು ಸರಳವಾಗಿ ಆಚರಿಸಲಾಗುತ್ತಿದೆ ಎಂದರು.



1956ರ ನವೆಂಬರ್ 1ರಂದು ಭಾಷಾವಾರು ಪ್ರಾಂತ್ಯಗಳ ಪುನರ್‌ರಚನೆಯ ಫಲವಾಗಿ ಮೈಸೂರು ರಾಜ್ಯ ಉದಯವಾಯಿತು. ಅದರ ಸ್ಮರಣಾರ್ಥ ಪ್ರತಿವರ್ಷ ಕನ್ನಡ ರಾಜ್ಯೋತ್ಸವ ಆಚರಿಸಲಾಗುತ್ತಿದೆ. ಕನ್ನಡವೆಂದರೆ ಕೇವಲ ಭಾಷೆಯಲ್ಲ, ಅದು ಭಾವನೆ, ಸಂಸ್ಕೃತಿ ಹಾಗೂ ಬಂಧುತ್ವದ ಸಂಕೇತವಾಗಿದೆ, ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಕನ್ನಡವನ್ನು ಬಿಟ್ಟು ಇಂಗ್ಲಿಷ್ ವ್ಯಾಮೋಹದ ಕಡೆಗೆ ಹೆಚ್ಚು ಒಲವು ತೋರುತ್ತಿರುವುದು ಬೇಸರದ ಸಂಗತಿ. ಮಕ್ಕಳನ್ನು ಕನ್ನಡದಲ್ಲಿ ಓದಿಸಿ, ಭಾಷೆಯ ಹಿರಿಮೆ ಹೆಚ್ಚಿಸುವ ಕೆಲಸ ಮಾಡಬೇಕು ಎಂದು ಕರೆ ನೀಡಿದರು.

ಪಂಚ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಪ್ರಕಾಶ ಜಮಾದಾರ ವಿಶೇಷ ಉಪನ್ಯಾಸ ನೀಡಿ, ಕನ್ನಡದ ಪರಂಪರೆ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗರ ಜವಾಬ್ದಾರಿಯಾಗಿದೆ. ಕನ್ನಡವನ್ನು ಪ್ರೀತಿಸಿ, ಗೌರವಿಸಿ, ದೈನಂದಿನ ಬದುಕಿನಲ್ಲಿ ಬಳಸುವ ಮೂಲಕ ಭಾಷೆಯನ್ನು ಬೆಳೆಸಬೇಕು ಎಂದರು.

ಈ ಸಂದರ್ಭದಲ್ಲಿ ಸಿಪಿಐ ಲಖನ್ ಮಸಗುಪ್ಪಿ, ಪಿಎಸ್‌ಐ ವಿಜಯಕುಮಾರ ನಾಯ್ಕ, ತೋಟಗಾರಿಕೆ ಇಲಾಖೆ ಅಧಿಕಾರಿ ಶಂಕರಗೌಡ ಪಾಟೀಲ, ಕೃಷಿ ಇಲಾಖೆ ಅಧಿಕಾರಿ ಎಸ್.ಎಚ್. ಗಡಗಿಮನಿ, ಸಿಡಿಪಿಒ ಪ್ರೇಮನಂದ, ಪಶು ಇಲಾಖೆ ಅಧಿಕಾರಿ ಕೆ.ಎಂ. ಕೋಟೆ ಸೇರಿದಂತೆ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷೆ ಪ್ರಭಾವತಿ ಮೇತ್ರಿ, ಪ್ರಾಧಿಕಾರ ಅಧ್ಯಕ್ಷ ಚಂದು ಕರಜಗಿ, ಎಪಿಎಂಸಿ ಅಧ್ಯಕ್ಷ ಮಂಜುನಾಥ ಅಂಜುಟಗಿ, ಗ್ರಾಮ ಸಹಾಯಕರ ಸಂಘದ ಅಧ್ಯಕ್ಷ ಅಣ್ಣರಾಯ ಜಮಾದಾರ, ಕರವೇ ಅಧ್ಯಕ್ಷ ಶ್ರೀಕಾಂತ ದಿವಾಣಜಿ, ಜೈ ಕರವೇ ಅಧ್ಯಕ್ಷ ಸುರೇಶ ಅವಟೆ, ಕರವೇ ಜಿಲ್ಲಾ ಸಂಘಟನೆ ಕಾರ್ಯದರ್ಶಿ ಸೌಮ್ಯ ಪಟ್ನೆ, ಮಹಿಳಾ ಅಧ್ಯಕ್ಷೆ ಪ್ರೀಯಾಂಕ ಕೋರಿ, ಉಮೇಶ ಅಂದೋಡಗಿ, ಸಿದ್ದರಾಮ ಸುಲ್ತಾನ ಪೂರ, ಮಹೇಶ ಆಲೇಗಾಂವ, ಔರಂಗಜೇಬ್ ಮುಜಾವರ, ದತ್ತು ಜಮಾದಾರ, ಯಲ್ಲಾಲಿಂಗ ಜಮಾದಾರ, ಸೋಮು ನಾಯ್ಕೋಡಿ, ಬಿ.ಎಂ. ರಾವ್ ಸೇರಿದಂತೆ ವಿವಿಧ ಶಾಲಾ ಮಕ್ಕಳು ಶಿಕ್ಷಕರು ಇದ್ದರು. ಕಾರ್ಯಕ್ರಮದಲ್ಲಿ ಅರಣ್ಯ ಇಲಾಖೆ ಅಧಿಕಾರಿ ರೇವಣಸಿದ್ದ ತಾವರಖೇಡ ಸ್ವಾಗತಿಸಿದರು. ಶಿಕ್ಷಕಿ ಅರ್ಚನಾ ಜೈನ್ ನಿರೂಪಿಸಿದರು.

ಕಬ್ಬಿಗೆ ಟನ್‌ಗೆ 5,500 ರೂ. ಬೆಂಬಲ ಬೆಲೆ ನಿಗದಿಪಡಿಸಲು ಆಗ್ರಹಿಸಿ ಚೌಡಾಪುರದಲ್ಲಿ ಹೆದ್ದಾರಿ ಬಂದ್ : ಸಾರ್ವಜನಿಕರ ಪರದಾಟ



ಕಲಬುರಗಿ:

ಕಬ್ಬಿಗೆ ಪ್ರತಿ ಟನ್‌ಗೆ 5,500 ರೂ. ಬೆಂಬಲ ಬೆಲೆ ನಿಗದಿಪಡಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಚೂನಪ್ಪ ಪೂಜಾರಿ ಬಣದ ಕಾರ್ಯಕರ್ತರು ಅಫಜಲಪುರ ತಾಲ್ಲೂಕಿನ ಚೌಡಾಪುರದಲ್ಲಿ ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿ ಪ್ರತಿಭಟನೆ ನಡೆಸಿದರು.

ಹೆದ್ದಾರಿಯಲ್ಲಿ ಟೆಂಟ್ ಹಾಕಿ, ಎತ್ತಿನ ಬಂಡಿಗಳು ಹಾಗೂ ಟ್ರ್ಯಾಕ್ಟರ್ ಟ್ರಾಲಿಗಳನ್ನು ನಿಲ್ಲಿಸಿ ಧರಣಿ ನಡೆಸಿದ ರೈತರು, ಸರ್ಕಾರದ ಧೋರಣೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಸಂತೋಷ ಮಲಗೊಂಡ, ಕಳೆದ ಮೂರು ದಿನಗಳಿಂದ ರಸ್ತೆ ಬದಿಯಲ್ಲಿ ಕುಳಿತು ಹೋರಾಟ ನಡೆಸುತ್ತಿದ್ದರೂ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಹಾಗೂ ಅಧಿಕಾರಿಗಳು ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ ರೈತರ ಸಮಸ್ಯೆಗಳನ್ನು ಆಲಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸಂಘದ ಕಾರ್ಯಾಧ್ಯಕ್ಷ ಸಿದ್ದು ದಣ್ಣೂರ ಮಾತನಾಡಿ, ಭೀಕರ ಬರಗಾಲದಿಂದ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಪ್ರತಿ ಟನ್‌ಗೆ 5,500 ರೂ.ಏಕರೂಪ ಬೆಲೆ ನಿಗದಿಪಡಿಸಿ ಸಕ್ಕರೆ ಕಾರ್ಖಾನೆಗಳನ್ನು ಆರಂಭಿಸಬೇಕು. ಇಲ್ಲವಾದರೆ ಕಾರ್ಖಾನೆಗಳ ಕಾರ್ಯಾರಂಭಕ್ಕೂ ತೊಂದರೆಯಾಗಲಿದೆ ಎಂದು ಎಚ್ಚರಿಕೆ ನೀಡಿದರು.

ರೈತರ ರಸ್ತೆ ಬಂದ್ ಹಾಗೂ ಪ್ರತಿಭಟನೆಯಿಂದ ಚೌಡಾಪುರದಲ್ಲಿ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗಿ ಸಾರ್ವಜನಿಕರು ಪರದಾಡುವಂತಾಯಿತು. ಸ್ಥಳದಲ್ಲಿ ಪೊಲೀಸರು ಸೂಕ್ತ ಬಂದೋಬಸ್ತ್ ಏರ್ಪಡಿಸಿದ್ದರು.

ರೈತರ ಬೇಡಿಕೆಗಳಿಗೆ ಸರ್ಕಾರ ತಕ್ಷಣ ಸ್ಪಂದಿಸಬೇಕು ಎಂಬ ಆಗ್ರಹ ಪ್ರತಿಭಟನೆಯಲ್ಲಿ ಕೇಳಿಬಂತು.

ಪ್ರತಿಭಟನೆಯಲ್ಲಿ ಜಿಲ್ಲಾ ಕಾರ್ಯಾಧ್ಯಕ್ಷ ಸಿದ್ದರಾಮ ಧಣ್ಣೂರ್ ತಾಲ್ಲೂಕು ಅಧ್ಯಕ್ಷ ಸಂತೋಷ್ ಜಿ. ಮಲಗೊಂಡ, ಅಶೋಕ್ ಹೂಗಾರ, ಶರಣಗೌಡ ಪಾಟೀಲ, ಕಾಸಿಂ ಹಳ್ಯಾಳ, ರಾಜು ಶೇಟ್ಟಿ, ರಾಘು ಸ್ವಾಮಿ, ಹರೀಶ್ ಸಾಸನೇಕರ, ಸುಭಾಷ್ ಲಿಂಗ ಶೆಟ್ಟಿ, ವಿಜಯ್ ಕುಮಾರ, ಸಾಯಿಬಣ್ಣ ಜಮಾದಾರ, ರಮೇಶ್ ಯಲಪ್ಪ, ಮಲ್ಲಪ್ಪ ಗೌಡ ಪಾಟೀಲ, ಅಣ್ಣಾರಾವ್ ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಜಿಲ್ಲಾಧಿಕಾರಿಗಳ ಭರವಸೆ: ಅಲ್ಟ್ರಾಟೆಕ್ ಸಿಮೆಂಟ್ ಕಂಪನಿ ವಿರುದ್ಧದ ಧರಣಿ ಹಿಂಪಡೆದ ಹೋರಾಟಗಾರರು

ಕಲಬುರಗಿ:

ಅಲ್ಟ್ರಾಟೆಕ್ ಸಿಮೆಂಟ್ ಕಂಪನಿಯ ಅಕ್ರಮಗಳ ಕುರಿತು ಸುಳ್ಳು ವರದಿ ನೀಡಲಾಗಿದೆ ಎಂದು ಆರೋಪಿಸಿ, ಕಾರ್ಮಿಕರು ಮತ್ತು ರೈತರ ಪರ ಹೋರಾಟಗಾರ ಅಶೋಕ ಕುಮಾರ್ ಶೀಲವಂತ್ ನೇತೃತ್ವದಲ್ಲಿ ನಡೆಸಲಾಗುತ್ತಿದ್ದ ಧರಣಿ ಸತ್ಯಾಗ್ರಹವನ್ನು ಜಿಲ್ಲಾಧಿಕಾರಿಗಳ ಭರವಸೆಯ ಹಿನ್ನೆಲೆಯಲ್ಲಿ ಹಿಂಪಡೆಯಲಾಗಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಳಖೇಡದಿಂದ ಅ. 28ರಂದು ಆರಂಭವಾಗಿದ್ದ ಪಾದಯಾತ್ರೆ ಅ. 31ರಂದು ಕಲಬುರಗಿ ಜಿಲ್ಲಾಧಿಕಾರಿ ಕಚೇರಿ ತಲುಪಿತ್ತು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದ ಹೋರಾಟಗಾರರು, ಅಲ್ಟ್ರಾಟೆಕ್ ಸಿಮೆಂಟ್ ಕಂಪನಿ ವಿರುದ್ಧ ಕ್ರಮ ಕೈಗೊಳ್ಳಬೇಕು ಹಾಗೂ ಕಂಪನಿಯ ಅಕ್ರಮಗಳ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದರು.

ಪ್ರತಿಭಟನಾಕಾರರ ಮನವಿಗೆ ಸ್ಪಂದಿಸಿದ ಜಿಲ್ಲಾಧಿಕಾರಿಗಳು, ಸಂಬಂಧಪಟ್ಟ ಅಧಿಕಾರಿಗಳಿಗೆ ನೋಟಿಸ್ ಜಾರಿಗೊಳಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಅಲ್ಲದೆ, ಪ್ರಕರಣದ ಕುರಿತು ತನಿಖಾ ತಂಡ ರಚಿಸುವುದಾಗಿ ತಿಳಿಸಿದರು. 2010ರಲ್ಲಿ ಉಡಗಿ ಮತ್ತು ಹಂಗನಹಳ್ಳಿ ಗ್ರಾಮಗಳಲ್ಲಿ ಭೂಮಿ ಕಳೆದುಕೊಂಡ ರೈತರಿಗೆ ಮನೆಗೊಂದು ಉದ್ಯೋಗ ಕೊಡಿಸುವ ಭರವಸೆಯನ್ನೂ ನೀಡಿದರು. ಈ ಭರವಸೆಗಳ ಹಿನ್ನೆಲೆಯಲ್ಲಿ ಧರಣಿ ಸತ್ಯಾಗ್ರಹವನ್ನು ಹಿಂಪಡೆಯಲಾಗಿದೆ ಎಂದು ಅಶೋಕ ಕುಮಾರ್ ಶೀಲವಂತ್ ತಿಳಿಸಿದ್ದಾರೆ.

ಸೇಡಂ ತಾಲೂಕಿನ ಬೀರನಹಳ್ಳಿ ಗ್ರಾಮದ 120 ಎಕರೆ ಗೋಮಾಳ ಜಮೀನಿನ ಕುರಿತು ಹಿಂದಿನ ಅಧಿಕಾರಿಗಳು ಸರ್ಕಾರಿ ಜಮೀನು ಎಂದು ವರದಿ ನೀಡಿದ್ದರೆ, ನಂತರದ ವರದಿಯಲ್ಲಿ ಖಾಸಗಿ ಜಮೀನು ಎಂದು ಉಲ್ಲೇಖಿಸಲಾಗಿದೆ. ಈ ವರದಿಗಳಲ್ಲಿನ ವ್ಯತ್ಯಾಸದ ಬಗ್ಗೆಯೂ ಸಮಗ್ರ ತನಿಖೆ ನಡೆಸಬೇಕು ಎಂದು ಹೋರಾಟಗಾರರು ಆಗ್ರಹಿಸಿದ್ದಾರೆ.

ಸಿಮೆಂಟ್ ಕಾರ್ಖಾನೆಗಳು, ಸಕ್ಕರೆ ಕಾರ್ಖಾನೆಗಳು ಹಾಗೂ ಸೋಲಾರ್ ಕಂಪನಿಗಳ ವಿರುದ್ಧ ಕೇಳಿಬಂದಿರುವ ಆರೋಪಗಳ ಕುರಿತು ಉಚ್ಚ ನ್ಯಾಯಾಲಯದ ನಿವೃತ್ತ ಮುಖ್ಯ ನ್ಯಾಯಮೂರ್ತಿಗಳ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಿ ತನಿಖೆ ನಡೆಸಬೇಕು ಎಂದು ಈ ಸಂದರ್ಭದಲ್ಲಿ ಒತ್ತಾಯಿಸಿದ್ದಾರೆ.

ಕಮಲನಗರ ಕನ್ನಡ ನಾಡು ಶ್ರೀಮಂತ ಸಾಹಿತ್ಯ, ಸಾಂಸ್ಕೃತಿಕ ಪರಂಪರೆ ಹೊಂದಿದೆ: ರೇಖಾ ಮಹಾಜನ್



ಕಮಲನಗರ:

ಕನ್ನಡ ನಾಡು ವೈಭವಪೂರ್ಣ ಇತಿಹಾಸ, ಶ್ರೀಮಂತ ಸಾಹಿತ್ಯ ಹಾಗೂ ವಿಶಿಷ್ಟ ಸಾಂಸ್ಕೃತಿಕ ಪರಂಪರೆಯನ್ನು ಹೊಂದಿದೆ ಎಂದು ಉಪನ್ಯಾಸಕಿ ರೇಖಾ ಮಹಾಜನ್ ಹೇಳಿದರು.

ಪಟ್ಟಣದ ಜಿಪಿಎಸ್ ಶಾಲೆಯ ಆವರಣದಲ್ಲಿ ರವಿವಾರ ಆಯೋಜಿಸಿದ್ದ 71ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಅವರು, ಇಂದಿನ ಮಕ್ಕಳಿಗೆ ನಮ್ಮ ಭಾಷೆ, ನಡೆ, ನುಡಿ ಹಾಗೂ ಸಂಸ್ಕೃತಿಯ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ಅಗತ್ಯವಿದೆ ಎಂದರು. ಯುವ ಪೀಳಿಗೆಗೆ ಕನ್ನಡ ನಾಡು-ನುಡಿಯ ಶ್ರೀಮಂತಿಕೆಯನ್ನು ಪರಿಚಯಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಸಮಾರಂಭಕ್ಕೂ ಮುನ್ನ ವಿವಿಧ ಶಾಲೆಗಳ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಉರ್ದು ಶಾಲೆ, ಎಂಪಿಎಸ್ ಶಾಲೆ, ಜಿಪಿಎಸ್ ಶಾಲೆ, ಗೋಲ್ಡನ್ ವ್ಯಾಲಿ ಶಾಲೆ ಹಾಗೂ ಗುರುಪ್ಪ ಟೊಣ್ಣ ಸೇರಿದಂತೆ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಪ್ರದರ್ಶಿಸಿದ ನೃತ್ಯ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನೆರೆದಿದ್ದ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾದವು.

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಒಟ್ಟು 10 ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಹಶೀಲ್ದಾರ್ ಅಮಿತ್ ಕುಮಾರ್ ವಹಿಸಿದ್ದರು. ಈ ಸಂದರ್ಭದಲ್ಲಿ ಇಓ ಹಣಮಂತರಾಯ್ ಕೌಟಗೆ, ಕಸಾಪ ಅಧ್ಯಕ್ಷ ಪ್ರಶಾಂತ್ ಮಠಪತಿ, ಮುಖ್ಯಶಿಕ್ಷಕ ಲಿಂಗಾನಂದ್ ಮಹಾಜನ್, ಪಿಡಿಒ ದಿಲೀಪ್ ಸಜ್ಜನಶೆಟ್ಟಿ ಹಾಗೂ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ತಾಲ್ಲೂಕು ಅಧ್ಯಕ್ಷ ಮನೋಜಕುಮಾರ್ ಹಿರೇಮಠ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಪ್ರಶಾಂತ್ ಸ್ವಾಗತಿಸಿದರು. ಉಮಾಕಾಂತ್ ಮಹಾಜನ್ ನಿರೂಪಿಸಿದರು.

ಒಂದನೇಯ ಪುಟದಿಂದ

ಬಸ್ ಪ್ರಯಾಣ ದರ ಏರಿಕೆ ಕುರಿತು ಇಂದು ಮಹತ್ವದ ಚರ್ಚೆ

ಇದರಿಂದ ಸಾರಿಗೆ ನಿಗಮಗಳ ಆದಾಯದ ಮೇಲೂ ಪರಿಣಾಮ ಬೀರಿದೆ. ಸರ್ಕಾರದಿಂದ ಶಕ್ತಿ ಯೋಜನೆಯ ಹಣ ಮರುಪಾವತಿಯಾಗುವಲ್ಲಿ ವಿಳಂಬವಾಗುತ್ತಿರುವುದೂ ಆರ್ಥಿಕ ಒತ್ತಡಕ್ಕೆ ಕಾರಣವಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಈ ಹಿಂದೆ 2025ರ ಜನವರಿ 5ರಂದು ರಾಜ್ಯದ ಸಾರಿಗೆ ಬಸ್ ಪ್ರಯಾಣ ದರವನ್ನು ಶೇ.15ರಷ್ಟು ಹೆಚ್ಚಿಸಲಾಗಿತ್ತು. ಈಗಲೂ ಶೇ.15ರಿಂದ 20ರಷ್ಟು ದರ ಏರಿಕೆಗೆ ಅನುಮತಿ ನೀಡುವ ಸಾಧ್ಯತೆ ಇದೆ.ಮತ್ತೊಮ್ಮೆ ದರ ಏರಿಕೆಗೆ ಸರ್ಕಾರ ಮುಂದಾಗಿರುವುದರಿಂದ ನಿತ್ಯ ಬಸ್‌ಗಳಲ್ಲಿ ಸಂಚರಿಸುವ ಲಕ್ಷಾಂತರ ಪ್ರಯಾಣಿಕರ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳುವ ಸಾಧ್ಯತೆಯಿದೆ ಎಂಬ ಆಕ್ರೋಶಗಳು ಕೇಳಿ ಬಂದಿವೆ.

ರಿಪೋರ್ಟರ್ಸ್ ಗಿಲ್ಡ್ ನಿಂದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ವೀರ ಹನುಮಾನಗೆ ಸನ್ಮಾನ

ಸಂಘದ ರಾಜ್ಯ ಸಮಿತಿ ಸದಸ್ಯ ಬಸವರಾಜ ನಾಗಡದಿನ್ನಿ, ಸಂಪಾದಕರ ಸಂಘದ ಅಧ್ಯಕ್ಷ ಚನ್ನಬಸವ ಬಾಗಲವಾಡ, ಗಿಲ್ಡ್ ಕಾರ್ಯದರ್ಶಿ ವೆಂಕಟೇಶ ಹೂಗಾರ ಸೇರಿದಂತೆ ಸಾಹಿತಿಗಳು, ಪತ್ರಕರ್ತರು ಇದ್ದರು.

ರೈತರ ಸಮಸ್ಯೆ ಚರ್ಚೆ: ಡಿಸಿ ದರ್ಪ 48 ಗಂಟೆ ಗಡುವು ಸ್ಪಷ್ಟನೆ ನೀಡಿದಿದ್ದರೆ ಉಪವಾಸ ಸತ್ಯಾಗ್ರಹ ಎಚ್ಚರಿಕೆ

ಇಲ್ಲದಿದ್ದರೆ ಉಪವಾಸ ಸತ್ಯಾಗ್ರಹ ನಡೆಸಲಾಗುವುದು.

ಜಿಲ್ಲಾಡಳಿತ ಬರದ ನೆಪ ಹೇಳಿ ರೈತರ ನಿಂತ ಬೆಳೆಗೆ ನೀರು ನೀಡುತ್ತಿಲ್ಲ, ಸಾರ್ವಜನಿಕರಿಗೆ ಕೆರೆಗಳ ಮೂಲಕ ಶುದ್ಧ ನೀರು ಪೂರೈಕೆ ಮಾಡುತ್ತಿಲ್ಲವೆಂದು ಆರೋಪಿಸಿದರು.

ಈ ಸಮಸ್ಯೆ ಗಳ ಬಗ್ಗೆ ಜಿಲ್ಲಾಧಿಕಾರಿ ಗಳಿಗೆ ಕೇಳಲು ಹೋದರೆ ಯಾವುದನ್ನು ಕೇಳದೇ ನೀವು ಯಾರು ಸಮಸ್ಯೆಗಳನ್ನು ಕೇಳಲು, ನೀವು ಸ್ಥಳೀಯರೆ ಎಂದು ಪ್ರಶ್ನಿಸಿ ಏರಿದ ಧ್ವನಿಯಲ್ಲಿ ಅವರು ಒಬ್ಬ ಮಹಿಳೆಯಾಗಿದ್ದು, ನಾನು ಮಹಿಳೆ ಎಂಬುದನ್ನು ಅರಿತು ಈ ರೀತಿ ವರ್ತನೆ ಮಾಡಿರುವುದು ಸರಿಯಾದ ಕ್ರಮವಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಚನ್ನಪ್ಪ,ಮಲ್ಲಿಕಾರ್ಜುನ್ ,ನಾಗೇಂದ್ರ, ಉಪಸ್ಥಿತರಿದ್ದರು.

ತಿಡಿಗೋಳ: ದಲಿತರಿಗೆ ದೇವಸ್ಥಾನ ಪ್ರವೇಶ: ಸಮಾನತೆಯ ಸಂವಿಧಾನಿಕ ಆಶಯಕ್ಕೆ ಸಾಕ್ಷಿಯಾದ ಐತಿಹಾಸಿಕ ಕ್ಷಣ

ಸಮುದಾಯದ ಶೈಕ್ಷಣಿಕ ಪ್ರಗತಿ, ಉದ್ಯೋಗಾವಕಾಶಗಳು ಹಾಗೂ ಗ್ರಾಮದಲ್ಲಿ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಬಗ್ಗೆಯೂ ಜಿಲ್ಲಾಧಿಕಾರಿಗಳು ಮತ್ತು ಸಿಇಒ ಅವರು ಚರ್ಚಿಸಿ, ಈ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವ ಕುರಿತು ತೀರ್ಮಾನಿಸಿದರು.

ಸಮಾಜದಲ್ಲಿ ಜಾತಿ, ಧರ್ಮ, ವರ್ಗಗಳ ಆಧಾರದ ಮೇಲೆ ಯಾವುದೇ ರೀತಿಯ ತಾರತಮ್ಯವಿಲ್ಲದೆ ಪ್ರತಿಯೊಬ್ಬರಿಗೂ ಸಮಾನ ಹಕ್ಕು, ಗೌರವ ಮತ್ತು ಅವಕಾಶಗಳು ದೊರೆಯಬೇಕು. ಸಂವಿಧಾನ ನೀಡಿರುವ ಹಕ್ಕುಗಳು ಕೇವಲ ಪುಸ್ತಕದ ಪುಟಗಳಿಗೆ ಸೀಮಿತವಾಗದೆ, ಪ್ರತಿಯೊಬ್ಬರ ಬದುಕಿನಲ್ಲಿಯೂ ಅನುಷ್ಠಾನಗೊಳ್ಳಬೇಕು ಎಂಬುದನ್ನು ತಿಡಿಗೋಳ ಗ್ರಾಮದ ಈ ಬೆಳವಣಿಗೆ ನೆನಪಿಸುತ್ತದೆ.

ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ದಿಕ್ಕಿನಲ್ಲಿ ಜಿಲ್ಲಾಡಳಿತ ಕೈಗೊಂಡ ಈ ಪ್ರಯತ್ನ ಶ್ಲಾಘನೀಯವಾಗಿದೆ. ಶಾಂತಿ, ಸೌಹಾರ್ದತೆ ಹಾಗೂ ಮಾನವೀಯ ಮೌಲ್ಯಗಳಿಗೆ ಆದ್ಯತೆ ನೀಡಿ ಸಮಸ್ಯೆಯನ್ನು ಸೌಹಾರ್ದಯುತವಾಗಿ ಬಗೆಹರಿಸಲು ಮುತುವರ್ಜಿ ವಹಿಸಿದ ಮಾನ್ಯ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಸಹಕರಿಸಿದ ಎಲ್ಲ ಅಧಿಕಾರಿಗಳಿಗೆ ಗೌರವಪೂರ್ವಕ ನಮನಗಳು.

ತಿಡಿಗೋಳ ಗ್ರಾಮದಲ್ಲಿ ನಡೆದ ಈ ಐತಿಹಾಸಿಕ ಬೆಳವಣಿಗೆ ಕೇವಲ ದೇವಸ್ಥಾನ ಪ್ರವೇಶದ ಘಟನೆಯಲ್ಲ; ಅದು ಸಮಾನತೆ, ಆತ್ಮಗೌರವ, ಸಾಮಾಜಿಕ ನ್ಯಾಯ ಮತ್ತು ಸಂವಿಧಾನಿಕ ಮೌಲ್ಯಗಳ ಗೆಲುವಿನ ಸಂಕೇತವಾಗಿದೆ.

ದಿನ್ನಿಯವರ ಜಿಲ್ಲಾ ರಾಜೋತ್ಸವ ಪ್ರಶಸ್ತಿ ಜಿಲ್ಲಾ ಕಲಾವಿದರಿಗೆ ಹೆಮ್ಮೆಯ ಕಿರಿಟ

ಕಾರ್ಯಕ್ರಮಗಳಲ್ಲಿ ಹೀಗೆ ಅನೇಕ ವೇದಿಕೆಗಳಲ್ಲಿ ಕ್ಲಾರಿಯೋನೆಟ್ ಸಂಗೀತ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ. ರಾಜ್ಯ ಹಾಗೂ ಹೊರ ರಾಜ್ಯಗಳಾದ ಗೋವಾ, ಮಧ್ಯಪ್ರದೇಶ, ಕೇರಳ, ತಮಿಳುನಾಡು, ಮಹಾರಾಷ್ಟ್ರ, ಆಂಧ್ರಪ್ರದೇಶ, ಉತ್ತರ ಪ್ರದೇಶಗಳಲ್ಲಿ ಮತ್ತು ಹೆಸರಾಂತ ವೇದಿಕೆಗಳಲ್ಲಿ ಕಾರ್ಯಕ್ರಮವನ್ನು ನೀಡಿದ್ದಾರೆ.

ದೇಶದ, ನಾಡಿನ ಖ್ಯಾತ ಕ್ಲಾರಿಯೋನೆಟ್ ವಾದಕರಾದ ದಿನ್ನಿ ಪೂಜಾರರವರಿಗೆ ನಾಡು ಅಲ್ಲದೇ ಹೊರ ರಾಜ್ಯಗಳ ಪ್ರಶಸ್ತಿಗಳ ಸರಮಾಲೆಯೇ ಇವರ ಕೊರಳಲ್ಲಿ ಅಜರಾಮರವಾಗಿ ಲಭಿಸಿವೆ, ನ್ಯಾಷನಲ್ ಸ್ಕಾಲರ್ಶಿಪ್ ಅವಾರ್ಡ್ ದೆಹಲಿ, ಸನಾದಿ ಅಪ್ಪಣ್ಣ ಪ್ರಶಸ್ತಿ ಬೀಳಗಿ, ಮಹಾಯೋಗಿ ವೇಮನ ಪ್ರಶಸ್ತಿ, ಸರ್ ಎಂ ವಿಶ್ವೇಶ್ವರಯ್ಯ ಪ್ರಶಸ್ತಿ, ಗಾನಯೋಗಿ ಪುಟ್ಟರಾಜ ಗವಾಯಿಗಳ ಪ್ರಶಸ್ತಿ, ಮಹಾಂತಶ್ರೀ ಪ್ರಶಸ್ತಿ, ರಂಗ ಸಿರಿ ಪ್ರಶಸ್ತಿ, ನೃಪತುಂಗ ಪ್ರಶಸ್ತಿ, ಕರ್ನಾಟಕ ಕಲ್ಚರಲ್ ಅಕಾಡೆಮಿ ಸಂಗೀತ ರತ್ನ ಪ್ರಶಸ್ತಿ,

ಹೊಸೂರು ರಾಮಸ್ವಾಮಿ ಸ್ಮಾರಕದತ್ತಿ ಪ್ರಶಸ್ತಿ, ಹಾಗೂ ಪ್ರಸ್ತುತ 2026- 27 ನೇ ಸಾಲಿನ ರಾಯಚೂರು ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ

ಹೀಗೆ ಅನೇಕ ಸಂಘ ಸಂಸ್ಥೆಗಳಿಂದ ಪ್ರಶಸ್ತಿ ಸನ್ಮಾನಗಳನ್ನು ಪಡೆದ ಕೀರ್ತಿ ಇವರದಾಗಿದೆ. ಇವರು ಕೇವಲ ದಿನ ಗ್ರಾಮಕಷ್ಟೆ ಅಲ್ಲದೆ ಜಿಲ್ಲೆ ಹಾಗೂ ರಾಜ್ಯಕ್ಕೆ ಕೀರ್ತಿಯನ್ನು ತಂದಿದ್ದಾರೆ, ಇವರಿಗೆ ರಾಯಚೂರು ಜಿಲ್ಲಾ ರಾಜೋತ್ಸವ ಪ್ರಶಸ್ತಿ ದೊರೆತದ್ದು ಜಿಲ್ಲೆಯ ಸರ್ವ ಕಲಾವಿದರಿಗೆ ಹೆಮ್ಮೆಯ ವಿಷಯವಾಗಿದೆ.

ಯಾದಗಿರಿ ನಿಲ್ದಾಣದಲ್ಲಿ ವಂದೇ ಭಾರತ್ ಸ್ಲೀಪರ್ ರೈಲು ನಿಲುಗಡೆಗೆ ಸೋಮಣ್ಣನವರೇ ಕಾರಣ: ಶಾಸಕ ಶರಣಗೌಡ ಕಂದಕೂರ

ಯಾದಗಿರಿ:

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದಲ್ಲಿ ರೈಲ್ವೆ ಸಚಿವರಾಗಿರುವ ವಿ. ಸೋಮಣ್ಣ ಅವರು ಮನಸ್ಸು ಮಾಡಿದ್ದರಿಂದಲೇ ವಂದೇ ಭಾರತ್ ಸ್ಲೀಪರ್ ರೈಲಿಗೆ ಯಾದಗಿರಿ ರೈಲು ನಿಲ್ದಾಣದಲ್ಲಿ ನಿಲುಗಡೆ ಸೌಲಭ್ಯ ದೊರೆತಿದೆ ಎಂದು ಗುರುಮಠಕಲ್ ಕ್ಷೇತ್ರದ ಜೆಡಿಎಸ್ ಶಾಸಕ ಶರಣಗೌಡ ಕಂದಕೂರ ಹೇಳಿದರು.

ನಗರದ ರೈಲು ನಿಲ್ದಾಣದಲ್ಲಿ ರವಿವಾರ ರಾತ್ರಿ ಆಯೋಜಿಸಿದ್ದ ವಂದೇ ಭಾರತ್ ಸ್ಲೀಪರ್ ರೈಲಿನ ನಿಲುಗಡೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಜ್ಯೋತಿ ಬೆಳಗಿಸಿ, ರೈಲಿಗೆ ಹಸಿರು ನಿಶಾನೆ ತೋರಿಸಿ ಅವರು ಮಾತನಾಡಿದರು.

ಈ ರೈಲು ಸಂಚಾರ ಆರಂಭಿಸಲಿದೆ ಎಂಬ ಮಾಹಿತಿ ತಿಳಿದ ಕೂಡಲೇ ರೈಲಿಗೆ ಯಾದಗಿರಿಯಲ್ಲಿ ನಿಲುಗಡೆ ನೀಡುವಂತೆ ಮನವಿ ಮಾಡಲು ಸಚಿವ ವಿ. ಸೋಮಣ್ಣ ಅವರನ್ನು ಭೇಟಿಯಾಗಲು ತೆರಳಿದ್ದೆ. ಯಾದಗಿರಿ ಜಿಲ್ಲೆ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಜಿಲ್ಲೆಗಳ ಪಟ್ಟಿಯಲ್ಲಿದ್ದು, ಇಲ್ಲಿನ ಜನರ ಅನುಕೂಲಕ್ಕಾಗಿ ರೈಲು ನಿಲುಗಡೆ ಮಾಡಬೇಕು ಎಂದು ಮನವಿ ಮಾಡಲು ಬಯಸಿದ್ದೆ. ಆದರೆ, ಅಂದು ಸಚಿವರು ಕಾಶ್ಮೀರದಲ್ಲಿದ್ದರು. ಹೀಗಾಗಿ ದೂರವಾಣಿ ಮೂಲಕವೇ ಅವರಿಗೆ ವಿಷಯ ತಿಳಿಸಿದೆ. ಕೇವಲ ಎರಡು ನಿಮಿಷಗಳಲ್ಲಿ ಗುಂತಕಲ್ ರೈಲ್ವೆ ವಿಭಾಗದ ಅಧಿಕಾರಿ ಗೋಪಾಲ ಕೃಷ್ಣನ್ ಅವರು ಸಂಪರ್ಕಿಸಿ ಬೇಡಿಕೆಯ ಕುರಿತು ಮಾಹಿತಿ ಪಡೆದುಕೊಂಡರು. ಸಚಿವರ ಸೂಚನೆಯಂತೆ ತಕ್ಷಣವೇ ಯಾದಗಿರಿಯಲ್ಲಿ ರೈಲು ನಿಲುಗಡೆಗೆ ಅವಕಾಶ ಕಲ್ಪಿಸಲಾಯಿತು ಎಂದು ವಿವರಿಸಿದರು.



ಪ್ರಧಾನಿ ನರೇಂದ್ರ ಮೋದಿ ಅವರು ಪ್ರಧಾನಿಯಾಗಿ, ವಿ. ಸೋಮಣ್ಣ ಅವರು ಸಚಿವರಾಗಿ ಹಾಗೂ ತಾನು ಶಾಸಕನಾಗಿ ಇರುವವರೆಗೂ ಯಾದಗಿರಿ ಜಿಲ್ಲೆಯಲ್ಲಿ ರೈಲ್ವೆ ಮತ್ತು ಜಲಶಕ್ತಿ ಇಲಾಖೆಗೆ ಸಂಬಂಧಿಸಿದಂತೆ ವಿವಿಧ ಅಭಿವೃದ್ಧಿ ಕಾರ್ಯ ಗಳನ್ನು ಕೈಗೊಳ್ಳಲು ಶತಪ್ರಯತ್ನ ಮಾಡುವುದಾಗಿ ಕಂದಕೂರ ಹೇಳಿದರು.

ಗುರುಮಠಕಲ್ ನಗರಕ್ಕೆ ಶಾಶ್ವತ ಕುಡಿಯುವ ನೀರಿನ ಯೋಜನೆ ಜಾರಿಗೊಳಿಸಲು ಕೇಂದ್ರ ಜಲಶಕ್ತಿ ಇಲಾಖೆಯಿಂದ ಅನುದಾನ ನೀಡುವಂತೆ ಸಚಿವ ಸೋಮಣ್ಣ ಅವರಿಗೆ ಮನವಿ ಮಾಡಿದ್ದು, ಈ ನಿಟ್ಟಿನಲ್ಲಿ ನಿರಂತರ ಪ್ರಯತ್ನ ನಡೆಸುವುದಾಗಿ ತಿಳಿಸಿದರು.

ಯಾದಗಿರಿಯಿಂದ ಬೆಂಗಳೂರಿಗೆ ಒಂದು ಪ್ಯಾಸೆಂಜರ್ ರೈಲು ಆರಂಭಿಸಬೇಕು ಹಾಗೂ ಕೋವಿಡ್‌ಗೂ ಮುನ್ನ ಸಂಚರಿಸುತ್ತಿದ್ದ, ಬಳಿಕ ಸ್ಥಗಿತಗೊಂಡಿರುವ ಇಂಟರ್‌ಸಿಟಿ ರೈಲನ್ನು ಮತ್ತೆ ಆರಂಭಿಸಬೇಕು ಎಂಬುದು ಇಲ್ಲಿನ ಜನರ ಬೇಡಿಕೆಯಾಗಿದೆ. ಈ ಕುರಿತು ಸಚಿವ ಸೋಮಣ್ಣ ಅವರಿಗೆ ಮನವಿ ಸಲ್ಲಿಸಲಾಗಿದೆ. ದೀಪಾವಳಿ ನಂತರ ಮತ್ತೊಮ್ಮೆ ಈ ಬೇಡಿಕೆಗಳ ಕುರಿತು ಸಚಿವರನ್ನು ಭೇಟಿಯಾಗಿ ಮನವಿ ಮಾಡುವುದಾಗಿ ಹೇಳಿದರು.

ಯಾವ ಜನ್ಮದ ಋಣವೋ ಗೊತ್ತಿಲ್ಲ, ತುಮಕೂರಿನ ಸಂಸದರಾಗಿದ್ದರೂ ಸಚಿವ ಸೋಮಣ್ಣ ಅವರು ಯಾದಗಿರಿ ಜಿಲ್ಲೆಯ ಯಾವುದೇ ಬೇಡಿಕೆ ಸಲ್ಲಿಸಿದರೂ ಸ್ಪಂದಿಸಿ ಅನುಮೋದನೆ ನೀಡುತ್ತಿದ್ದಾರೆ. ಇದಕ್ಕಾಗಿ ಜಿಲ್ಲೆಯ ಜನರ ಪರವಾಗಿ ಸಚಿವ ಸೋಮಣ್ಣ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರು, ಯಾದಗಿರಿ ರೈಲು ನಿಲ್ದಾಣದಲ್ಲಿ ವಂದೇ ಭಾರತ್ ಸ್ಲೀಪರ್ ರೈಲಿಗೆ ನಿಲುಗಡೆ ಕಲ್ಪಿಸಿರುವ ಕೇಂದ್ರ ಸರ್ಕಾರ ಹಾಗೂ ರೈಲ್ವೆ ಸಚಿವ ವಿ. ಸೋಮಣ್ಣ ಅವರ ಕ್ರಮವನ್ನು ಸ್ವಾಗತಿಸಿದರು.

ಸರ್ಕಾರಗಳು ಯಾವುದೇ ಇರಲಿ, ಯಾದಗಿರಿ ರೈಲು ನಿಲ್ದಾಣದಲ್ಲಿ ಎಲ್ಲ ರೈಲುಗಳಿಗೂ ನಿಲುಗಡೆ ಸೌಲಭ್ಯ ದೊರೆಯುವ ನಿಟ್ಟಿನಲ್ಲಿ ಸಹಜವಾಗಿ ಕೆಲಸವಾಗಬೇಕು. ಆದರೆ, ಪ್ರತಿ ರೈಲಿನ ನಿಲುಗಡೆಗೂ ಜನಪ್ರತಿನಿಧಿಗಳು ಮನವಿ ಸಲ್ಲಿಸಿ ಒತ್ತಾಯಿಸಬೇಕಾದ ಪರಿಸ್ಥಿತಿ ಇದೆ. ಇಂತಹ ಸ್ಥಿತಿ ಮುಂದುವರಿಯಬಾರದು ಎಂದು ಹೇಳಿದರು.

ಈ ರೈಲಿನ ನಿಲುಗಡೆಗೆ ಶಾಸಕ ಶರಣಗೌಡ ಕಂದಕೂರ ನಡೆಸಿದ ಪ್ರಯತ್ನ ಮೆಚ್ಚುವಂತಹದ್ದು. ಸಚಿವ ಸೋಮಣ್ಣ ಅವರೊಂದಿಗೆ ನಿರಂತರ ಸಂಪರ್ಕ ಇಟ್ಟುಕೊಂಡು ಈ ಕೆಲಸ ಮಾಡಿಸಿದ್ದಾರೆ. ಇದಕ್ಕಾಗಿ ಕಂದಕೂರ, ಸಚಿವ ಸೋಮಣ್ಣ ಹಾಗೂ ಪ್ರಧಾನಿ ಮೋದಿ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಎಡಿಆರ್‌ಎಂ ಸಂಜೀವರಾವ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಿಸಿಎಂ ಸೌರವ್ ಪ್ರಕಾಶ್ ಹಾಗೂ ಯಾದಗಿರಿ ರೈಲು ನಿಲ್ದಾಣದ ವ್ಯವಸ್ಥಾಪಕ ಭಾಗೀರಥ ಮೀನಾ ವೇದಿಕೆಯಲ್ಲಿದ್ದರು.

ಕಾರ್ಯಕ್ರಮದಲ್ಲಿ ಮಾಜಿ ಸಂಸದ ಡಾ. ಉಮೇಶ್ ಜಾಧವ್, ಮಾಜಿ ವಿಧಾನ ಪರಿಷತ್ ಸದಸ್ಯ ಅಮರನಾಥ ಪಾಟೀಲ್, ಬಿಜೆಪಿ ಮುಖಂಡರಾದ ರಾಚಣ್ಣಗೌಡ, ದೇವಿಂದ್ರನಾಥ ನಾದ, ಸುಭಾಷಚಂದ್ರ ಕಟಕಟಿ, ನಾಗರತ್ನ ಅನಪುರ, ಶ್ರೀಧರ ಸಾಹುಕಾರ, ಮಲ್ಲಣ್ಣಗೌಡ ಕೌಳೂರ, ಟಿ.ಎನ್. ಭೀಮುನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಅಮರಯ್ಯ ಸ್ವಾಮಿ ಜಾಲಿಬೆಂಚ್ ಹಾಗೂ ರೈಲ್ವೆ ಟಿಸಿ ನಿರ್ಮಲಾ ಕಾರ್ಯಕ್ರಮ ನಿರೂಪಿಸಿದರು. ಹೊಸ ರೈಲನ್ನು ಸ್ವಾಗತಿಸಲು ಸಾವಿರಾರು ಜನರು ಆಗಮಿಸಿದ್ದರು.

ಸೇಡಂಗೆ ತೆರಳಿ ರಾಜಧಾನಿ ರೈಲು ಹತ್ತುತ್ತಿದ್ದರು :

ಯಾದಗಿರಿ ಜಿಲ್ಲೆಯಲ್ಲಿ ಈ ಹಿಂದೆ ರೈಲು ಸೌಲಭ್ಯಗಳ ಕೊರತೆ ಎಷ್ಟಿತ್ತು ಎಂಬುದಕ್ಕೆ ಉದಾಹರಣೆ ನೀಡಿದ ಶಾಸಕ ಶರಣಗೌಡ ಕಂದಕೂರ, ಇದೇ ಜಿಲ್ಲೆಯಲ್ಲಿ 48 ವರ್ಷಗಳ ಕಾಲ ರಾಜಕೀಯ ಮಾಡಿ ಅಧಿಕಾರ ಅನುಭವಿಸಿ, ಈಗ ದೆಹಲಿಯಲ್ಲಿ ರಾಜಕೀಯ ಮಾಡುತ್ತಿರುವವರು ಕೂಡ ರಾಜಧಾನಿ ರೈಲಿನಲ್ಲಿ ಪ್ರಯಾಣಿಸಲು ಪಕ್ಕದ ಸೇಡಂ ಪಟ್ಟಣಕ್ಕೆ ತೆರಳಬೇಕಾಗಿತ್ತು. ಆದರೆ, ಯಾದಗಿರಿ ರೈಲು ನಿಲ್ದಾಣದಲ್ಲಿ ರಾಜಧಾನಿ ರೈಲಿನ ನಿಲುಗಡೆಗೆ ಅವರು ಯಾವುದೇ ಪ್ರಯತ್ನ ಮಾಡಿರಲಿಲ್ಲ ಎಂದು ರಾಜ್ಯಸಭೆಯ ಪ್ರತಿಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಹೆಸರನ್ನು ಪ್ರಸ್ತಾಪಿಸದೆ ಟೀಕಿಸಿದರು.

ತಮ್ಮ ತಂದೆ ನಾಗನಗೌಡ ಕಂದಕೂರ ಅವರ ಪ್ರಥಮ ಪುಣ್ಯಸ್ಮರಣೆ ಸಂದರ್ಭದಲ್ಲಿ ರಾಜಧಾನಿ ರೈಲಿಗೆ ಯಾದಗಿರಿಯಲ್ಲಿ ನಿಲುಗಡೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿತ್ತು ಎಂಬುದನ್ನು ಅವರು ಸ್ಮರಿಸಿದರು.

ವಿದ್ಯಾರ್ಥಿ ಮೇಲೆ ಹಲ್ಲೆ ಆರೋಪ: 24 ಗಂಟೆಯೊಳಗೆ ಆರೋಪಿಗಳ ಬಂಧನಕ್ಕೆ ಕರವೇ ಆಗ್ರಹ

ಕಲಬುರಗಿ,

ರಾಜಾಪುರದ ಡಾ.ಬಿ.ಆರ್.ಅಂಬೇಡ್ಕರ್ ವಸತಿ ನಿಲಯದಲ್ಲಿ ಮಾದಿಗ ಸಮುದಾಯದ ವಿದ್ಯಾರ್ಥಿಯೊಬ್ಬನ ಮೇಲೆ ಹಲ್ಲೆ ನಡೆಸಿದ ಆರೋಪಿಗಳನ್ನು 24 ಗಂಟೆಯೊಳಗೆ ಬಂಧಿಸದಿದ್ದರೆ ಬ್ರಹ್ಮಪುರ ಪೊಲೀಸ್ ಠಾಣೆ ಎದುರು ಪ್ರತಿಭಟನೆ ನಡೆಸುವುದಾಗಿ ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ಎಚ್ಚರಿಕೆ ನೀಡಿದೆ.

ಸೋಮವಾರ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕರವೇ ಕಲಬುರಗಿ ಜಿಲ್ಲಾಧ್ಯಕ್ಷ ಮಂಜುನಾಥ ನಾಲವಾರಕರ, ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿರುವ ಈ ವಸತಿ ನಿಲಯಕ್ಕೆ ಚಿತ್ತಾಪುರ ಮೂಲದ ಸುಮೀತ್ ತಂದೆ ರಾಜಶೇಖರ ಹೊಸಳ್ಳಿ ಎಂಬ ವಿದ್ಯಾರ್ಥಿ ಪ್ರವೇಶ ಪಡೆದಿದ್ದರು. ಅವರು ಕಲಬುರಗಿ ನಗರದ ಐಟಿಐ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಸೆ. 29ರಂದು ಸಂಜೆ ಸುಮಾರು 6 ಗಂಟೆಗೆ ಕಾಲೇಜಿನಿಂದ ವಸತಿ ನಿಲಯಕ್ಕೆ ತೆರಳಿದ್ದ ಸುಮೀತ್ ಅವರಿಗೆ ಮಧ್ಯರಾತ್ರಿ 12ರಿಂದ ಬೆಳಗಿನ ಜಾವ 5 ಗಂಟೆಯವರೆಗೆ ವಸತಿ ನಿಲಯದ ವಿದ್ಯಾರ್ಥಿಗಳಾದ ರೋಷನ, ಶರಣು, ಲಕ್ಷ್ಮಣ ಹಾಗೂ ಬಸವ ಎಂಬವರು ಚಿತ್ರಹಿಂಸೆ ನೀಡಿದ್ದಾರೆ ಎಂದು ಆರೋಪಿಸಿದರು.

ಪೋಷಕರಿಂದ 30 ಸಾವಿರ ರೂ. ಹಣ ತರುವಂತೆ ಒತ್ತಾಯಿಸಿದ್ದಲ್ಲದೆ, ಬಲವಂತವಾಗಿ ಮದ್ಯ ಸೇವನೆ ಮಾಡಿಸಿ ಮನಬಂದಂತೆ ಹಲ್ಲೆ ನಡೆಸಿದ್ದಾರೆ ಎಂದು ಅವರು ದೂರಿದರು.

ಈ ಸಂಬಂಧ ಸೆ. 30ರಂದೇ ಬ್ರಹ್ಮಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಆದರೆ, ಇದುವರೆಗೂ ಆರೋಪಿಗಳನ್ನು ಬಂಧಿಸದೆ ಪೊಲೀಸರು ಅವರಿಗೆ ರಕ್ಷಣೆ ನೀಡುತ್ತಿದ್ದಾರೆ ಎಂದು ಮಂಜುನಾಥ ನಾಲವಾರಕರ ಆರೋಪಿಸಿದರು. ಪೊಲೀಸರ ಈ ನಡೆಯನ್ನು ಖಂಡಿಸಿದ ಅವರು, 24 ಗಂಟೆಯೊಳಗೆ ಆರೋಪಿಗಳನ್ನು ಬಂಧಿಸದಿದ್ದರೆ ಪೊಲೀಸ್ ಠಾಣೆ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ನೀರಿನ ಸಮಸ್ಯೆ ನಿವಾರಣೆಯಲ್ಲಿ ನಿರ್ಲಕ್ಷ್ಯ ವಹಿಸಿದರೆ ಅಮಾನತು: ಸಚಿವ ಶರಣಪ್ರಕಾಶ್ ಪಾಟೀಲ್ ಎಚ್ಚರಿಕೆ

ಕಲಬುರಗಿ:

ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕು. ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರಿದರೆ ಯಾವುದೇ ಮುಲಾಜಿಲ್ಲದೆ ಅಮಾನತು ಮಾಡಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಆರ್. ಪಾಟೀಲ್ ಎಚ್ಚರಿಕೆ ನೀಡಿದರು.



ಸೇಡಂ ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ತುರ್ತು ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು.

ಗ್ರಾಮ ಪಂಚಾಯಿತಿ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ನೀರಿನ ಸಮಸ್ಯೆ ಇರುವ ಗ್ರಾಮಗಳನ್ನು ಗುರುತಿಸಬೇಕು. ಈಗಿರುವ ಬೋರ್‌ವೆಲ್‌ಗಳನ್ನು ಫ್ಲಶಿಂಗ್ ಮಾಡಿಸಬೇಕು. ಅಗತ್ಯವಿದ್ದಲ್ಲಿ ಹೊಸ ಬೋರ್‌ವೆಲ್ ಕೊರೆಸಬೇಕು. ಜನರು ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಸೂಕ್ತ ವ್ಯವಸ್ಥೆ ಕಲ್ಪಿಸಬೇಕು ಎಂದು ಸೂಚಿಸಿದರು.

ಸಂಬಂಧಪಟ್ಟ ಪಿಡಿಒಗಳು ಸಮಸ್ಯೆ ಕುರಿತು ಮೇಲಧಿಕಾರಿಗಳಿಗೆ ಮಾಹಿತಿ ನೀಡಿ ಸ್ಥಳಕ್ಕೆ ಭೇಟಿ ನೀಡಿ ತಕ್ಷಣ ಪರಿಹಾರ ಕಲ್ಪಿಸಬೇಕು. ಮಳೆ ಕೊರತೆಯಿಂದ ತಾಲೂಕಿನಲ್ಲಿ ನೀರಿನ ಅಭಾವ ಹೆಚ್ಚಾಗುತ್ತಿದ್ದು, ಮುಂದಿನ ದಿನಗಳಲ್ಲಿ ರೈತರು ಹಾಗೂ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮ ವಹಿಸಬೇಕು. ಗ್ರಾಮೀಣ ಭಾಗದ ನೀರಾವರಿ ವ್ಯವಸ್ಥೆಯಲ್ಲಿನ ಸಮಸ್ಯೆಗಳನ್ನೂ ಕೂಡಲೇ ಪರಿಶೀಲಿಸಿ ಪರಿಹರಿಸಬೇಕು ಎಂದರು.

ಗ್ರಾಮಸ್ಥರು ನೀರಿನ ಸಮಸ್ಯೆ ಕುರಿತು ತಮ್ಮ ಗಮನಕ್ಕೆ ತಂದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಪ್ರಭು ರೆಡ್ಡಿ, ತಹಶೀಲ್ದಾರ್ ಶ್ರೀಯಾಂಕ ಧನಶ್ರೀ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸೈಯದ್ ಪಟೇಲ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಕನ್ನಡದ ಅಸ್ಮಿತೆ, ಆತ್ಮಗೌರವ ಉಳಿಸಲು ಎಲ್ಲರೂ ಕೈಜೋಡಿಸಿ: ತಹಶೀಲ್ದಾರ್ ಅಣ್ಣಾರಾವ್ ಪಾಟೀಲ್



ಕಲಬುರಗಿ:

ಸಾವಿರಾರು ವರ್ಷಗಳ ಇತಿಹಾಸ, ಶ್ರೀಮಂತ ಸಾಹಿತ್ಯ ಪರಂಪರೆ, ವೈವಿಧ್ಯಮಯ ಸಂಸ್ಕೃತಿ, ಕಲೆ ಹಾಗೂ ಬದುಕಿನ ಸೊಬಗನ್ನು ಹೊಂದಿರುವ ಕನ್ನಡ ನಾಡಿನ ಭಾಷೆ, ನೆಲ, ಜಲ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗನ ಜವಾಬ್ದಾರಿಯಾಗಿದೆ. ಕನ್ನಡವೆಂಬುದು ಕೇವಲ ಭಾಷೆಯಲ್ಲ, ಅದು ನಮ್ಮ ಅಸ್ಮಿತೆ, ಆತ್ಮಗೌರವ ಮತ್ತು ಬದುಕಿನ ಉಸಿರು. ಕನ್ನಡದ ಕಂಪು ಜಗದಗಲ ಪಸರಿಸುವುದರೊಂದಿಗೆ ಕನ್ನಡಿಗರ ಹೆಮ್ಮೆ ನಿತ್ಯವೂ ಬೆಳಗಬೇಕು ಎಂದು ತಹಶೀಲ್ದಾರ ಅಣ್ಣಾರಾವ್ ಪಾಟೀಲ್ ಹೇಳಿದರು.

ಪಟ್ಟಣದ ಹೊರ ವಲಯದಲ್ಲಿರುವ ತಾಲೂಕು ಆಡಳಿತ ಸೌಧದಲ್ಲಿ ತಾಲೂಕು ಆಡಳಿತ ವತಿಯಿಂದ ಕನ್ನಡ ರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಹಾಗೂ ಕಳೆದ ವರ್ಷ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಕನ್ನಡ ವಿಷಯದಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಿ ಮಾತನಾಡಿದ ಅವರು, ಪೂರ್ವಸಿದ್ಧತಾ ಸಭೆಗಳಲ್ಲಿ ಕಾರ್ಯಕ್ರಮವನ್ನು ಹೇಗೆ ಆಯೋಜಿಸಬೇಕು ಎಂಬವುದರ ಕುರಿತು ಸಲಹೆಗಳನ್ನು ನೀಡಿದರು.

ಮುಖ್ಯ ಅತಿಥಿ ಕಸಾಪ ತಾಲೂಕು ಅಧ್ಯಕ್ಷ ಹಣಮಂತ ಶೇರಿ ಮಾತನಾಡಿ, ಕನ್ನಡದ ಅಭಿಮಾನ ನಮ್ಮ ಮಾತಿನಲಷ್ಟೇ ಇರದೆ, ನಮ್ಮ ನಡೆ ನುಡಿಗಳಲ್ಲಿಯೂ ಪ್ರತಿಫಲಿಸಬೇಕು, ಕನ್ನಡದ ಕೀರ್ತಿ ಹೆಚ್ಚಿಸುವ ಕಾರ್ಯಕ್ರಮದಲ್ಲಿ ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆಗಳು ನೀಡಬೇಕು, ಅಂದಾಗ ಮಾತ್ರ ಕನ್ನಡ ಸಮೃದ್ಧಿವಾಗಿ ಬೆಳೆಯಲು ಸಾಧ್ಯ ಎಂದರು.

ಈ ವೇಳೆ ಧುತರಗಾವಂದ ಪ್ರೌಢ ಶಾಲೆಯ ಶಿಕ್ಷಕಿ ರಾಜಶ್ರೀ ಒಂಟಿ ಉಪನ್ಯಾಸ ನೀಡಿದರು.

ಮುಖ್ಯಾಧಿಕಾರಿ ಸಂಗಮೇಶ ಪನಶೆಟ್ಟಿ ಹಾಗೂ ಡಾ. ಯಲ್ಲಪ್ಪ ಇಂಗಳೆ, ಸುರೇಂದ್ರನಾಥ, ಹೋನೆಶ ಅಳಗಿ ವೇದಿಕೆಯಲ್ಲಿ ಇದ್ದರು, ಮಹಾಂತೇಶ ಸಣಮನಿ, ಮಹಾದೇವ ಹತ್ತಿ, ಶರಣು ಹಕ್ಕಿ, ಪಂಕಜ ಪಾಟೀಲ, ಆನಂದ ಪೂಜಾರಿ, ಅಧಿಕಾರಿಗಳು ಉಪಸ್ಥಿತರಿದ್ದರು.

ಕಲ್ಯಾಣಪ್ಪ ಬಿಜ್ಜರಗಿ ನಿರೂಪಿಸಿದರು, ರಾಕೇಶ್ ಶೀಲ್ಡ ಸ್ವಾಗತ ಕೋರಿದರು, ಆಕಾಶ ಸಜ್ಜನ ವಂದಿಸಿದರು.

ಕಲ್ಯಾಣ ಕರ್ನಾಟಕದ 800 ನೌಕರರಿಗೆ ಸೇವಾ ಭದ್ರತೆ ಕಲ್ಪಿಸಲು ಆಗ್ರಹ

ಕಲಬುರಗಿ :

ಕೊರೋನಾ ಸಂದರ್ಭದಲ್ಲಿ ಜಾರಿಗೊಳಿಸಲಾದ ಸುತ್ತೋಲೆಯಿಂದಾಗಿ ಸೇವಾ ಅನಿಶ್ಚಿತತೆ ಎದುರಿಸುತ್ತಿರುವ ಕಲ್ಯಾಣ ಕರ್ನಾಟಕದ ಆರು ಇಲಾಖೆಗಳ ಸುಮಾರು 800 ನೌಕರರಿಗೆ ಸೇವಾ ಭದ್ರತೆ ಕಲ್ಪಿಸುವಂತೆ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ರಾಜ್ಯ ಗೃಹ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಮನವಿ ಸಲ್ಲಿಸಿದೆ.

ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಡಾ. ಲಕ್ಷ್ಮಣ ದಸ್ತಿ ನೇತೃತ್ವದ ನಿಯೋಗ ರವಿವಾರ ಕಲಬುರಗಿ ನಗರದಲ್ಲಿ ಸಚಿವರನ್ನು ಭೇಟಿ ಮಾಡಿ, ನೌಕರರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಮನವರಿಕೆ ಮಾಡಿಕೊಟ್ಟಿತು.

2020ರಲ್ಲಿ ಆಗಿನ ಸರ್ಕಾರದ 371ನೇ ಜೆ ಕಲಂ ಸಂಪುಟ ಉಪಸಮಿತಿ ಜಾರಿಗೊಳಿಸಿದ ಸುತ್ತೋಲೆಯು ಸಂವಿಧಾನದ ಮೀಸಲಾತಿಯ ಮೂಲ ಉದ್ದೇಶ ಹಾಗೂ ಕಲ್ಯಾಣ ಕರ್ನಾಟಕಕ್ಕೆ



ವಿಶೇಷ ಸ್ಥಾನಮಾನ ಕಲ್ಪಿಸುವ 371ನೇ ಜೆ ಕಲಂನ ಆಶಯಕ್ಕೆ ವಿರುದ್ಧವಾಗಿದೆ. ಈ ಸುತ್ತೋಲೆಯಿಂದಾಗಿ ಪ್ರದೇಶದ ಅಭ್ಯರ್ಥಿಗಳಿಗೆ ತಮ್ಮ ಪಾಲಿನ ಉದ್ಯೋಗಾವಕಾಶಗಳು ಸಂಪೂರ್ಣವಾಗಿ ದೊರೆಯದಂತಾಗಿದೆ ಎಂದು ಸಮಿತಿ ತಿಳಿಸಿದೆ.

ಈ ಸಮಸ್ಯೆಯನ್ನು ಸರಿಪಡಿಸಲು ಸರ್ಕಾರ 2023ರ ಫೆಬ್ರವರಿ 1ರ ಸುತ್ತೋಲೆಯಂತೆ ನೇಮಕಾತಿ ನಿಯಮಗಳನ್ನು ಜಾರಿಗೆ ತಂದಿದೆ. ಅದರನ್ವಯ ಮೆರಿಟ್ ಆಧಾರದ ಮೇಲೆ ಆರು ಇಲಾಖೆಗಳ ಸುಮಾರು 800 ಅಭ್ಯರ್ಥಿಗಳು ಆಯ್ಕೆಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಆದರೆ, ಕಲಬುರಗಿ ಮತ್ತು ಬೆಂಗಳೂರು ಹೈಕೋರ್ಟ್‌ಗಳ ದ್ವಿಸದಸ್ಯ ಪೀಠದ ತೀರ್ಪಿನಿಂದ ಈ ನೌಕರರ ಸೇವೆ ಅನಿಶ್ಚಿತತೆಗೆ ಸಿಲುಕಿದೆ ಎಂದು ಮನವಿಯಲ್ಲಿ ವಿವರಿಸಲಾಗಿದೆ.

ನೌಕರರ ಸೇವಾ ಭದ್ರತೆಗಾಗಿ ಸರ್ಕಾರ ಸಮರ್ಥವಾಗಿ ನ್ಯಾಯಾಂಗ ಹೋರಾಟ ನಡೆಸುವುದರ ಜೊತೆಗೆ ರಾಜಕೀಯ ಇಚ್ಛಾಶಕ್ತಿಯನ್ನೂ ಪ್ರದರ್ಶಿಸಬೇಕು ಎಂದು ಸಮಿತಿ ಒತ್ತಾಯಿಸಿದೆ.

ಮನವಿಗೆ ಸ್ಪಂದಿಸಿದ ಸಚಿವ ಪ್ರಿಯಾಂಕ್ ಖರ್ಗೆ, ಈ ವಿಷಯದ ಕುರಿತು ಸಂಪೂರ್ಣ ಅರಿವಿದ್ದು, ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಮಿತಿಯ ಮುಖಂಡರಾದ ಮನೀಷ ಜಾಜು, ರೌಫ್ ಖಾದ್ರಿ, ಕುಮಾರ ಮಠ, ಶಿವಕುಮಾರ ಪಾಟೀಲ, ಮಹಿಬೂಬ್, ಕಾಶಿನಾಥ ಬಿರಾದಾರ, ದೇವಪ್ಪ, ವಿಶ್ವನಾಥ ಮಾಳಗೆ, ಮಾಳಪ್ಪ ಪೂಜಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ರಾಮಲೀಲಾ ಪ್ರತಿಭಟನೆ ಐತಿಹಾಸಿಕ; ಪ್ರಚಂಡ ಜನಶಕ್ತಿಯಿಂದ ಮಾತ್ರವೇ ಸರ್ವಾಧಿಕಾರಿ ಶಕ್ತಿಗಳ ಧೂಳೀಪಟ ಸಾಧ್ಯ

ಬೃಹತ್ ಪ್ರತಿಭಟನೆಗಳಷ್ಟೇ ಸಾಲದು, ಪಕ್ಷಗಳ ಸಂಘಟನೆಗಳನ್ನು ಬಲಿಷ್ಠವಾಗಿ ಕಟ್ಟುವುದು ಪ್ರತಿಪಕ್ಷಗಳ ಮುಂದಿರುವ ದೊಡ್ಡ ಸವಾಲು. ತಮ್ಮ ಎಲ್ಲ ನೈತಿಕ ಮತ್ತು ಆರ್ಥಿಕ ಶಕ್ತಿಯನ್ನು ಅವು ಜನತೆಯಿಂದಲೇ ಪಡೆಯಬೇಕು. ಹೀಗೆ ಪಡೆಯಲು ಪ್ರಾಮಾಣಿಕವಾಗಿ ಶ್ರಮಿಸಬೇಕು. ಜನಾಂದೋಲನವು ಬೇರು ಮಟ್ಟ ತಲುಪಬೇಕು. ಪರಿಣಾಮವಾಗಿ ಹುಟ್ಟುವ ಪ್ರಚಂಡ ಜನಶಕ್ತಿ ಮಾತ್ರವೇ ಸರ್ವಾಧಿಕಾರಿ ಶಕ್ತಿಗಳನ್ನು ಧೂಳೀಪಟ ಮಾಡಬಲ್ಲದು.

ಭಾನುವಾರ ದೆಹಲಿಯ ರಾಮಲೀಲಾ ಮೈದಾನದಲ್ಲಿ ನಡೆದ ಇಂಡಿಯಾ ಒಕ್ಕೂಟದ ಪ್ರತಿಪಕ್ಷಗಳ ಮಹಾ ರ್ಯಾಲಿ ಭಾರತ ರಾಜಕಾರಣದ ಇತಿಹಾಸದ ಹೊಸ ಮೈಲಿಗಲ್ಲಾಗಿ ನಿಲ್ಲಲಿದೆ. ಮೋದಿ ಮಡಿಲಲ್ಲಿ ಆಡುವ ಗೋದಿ ಮೀಡಿಯಾ ಕೂಡ ಈ ರ್ಯಾಲಿಯ ಅಪಾರ ಜನಸ್ತೋಮವನ್ನು ಎದ್ದು ಕುಳಿತು ಕಣ್ಣು ಹೊಸಕಿಕೊಂಡು ಗಮನಿಸಿರುವುದು ಹೊಸ ವಿದ್ಯಮಾನ.

ನೆನ್ನೆ 2026ರ ನವೆಂಬರ್ ಒಂದರ ಭಾನುವಾರ. ಅದೇ ರಾಮಲೀಲಾ ಮೈದಾನ. ಪ್ರತಿಪಕ್ಷಗಳ ಪ್ರತಿಭಟನೆಯ ಮತ್ತೊಂದು ಮಹಾ ರ್ಯಾಲಿ ನಡೆಯಿತು. ಗ್ಯಾನೇಶ್ ಕುಮಾರ್ ಮತ್ತು ಅವರ ಹಿಂದಿರುವ ಮೋಶಾ ಜೋಡಿಯ ಮತಗಳ್ಳತನವನ್ನು ವಿರೋಧಿಸುವುದೇ ಈ ರ್ಯಾಲಿಯ ಪ್ರಧಾನ ಉದ್ದೇಶವಾಗಿತ್ತು.

ಸಂಸತ್ತು, ಉನ್ನತ ನ್ಯಾಯಾಂಗ ಮತ್ತು ಗೋದಿ ಮಾಧ್ಯಮಗಳ ಈಗಿನ ಕಾರ್ಯವೈಖರಿ- ನ್ಯಾಯಬದ್ಧತೆಯನ್ನು ಪ್ರಶ್ನಿಸುವುದೇ ಈ ಹೋರಾಟದ ತಂತ್ರ. ಪ್ರಜಾಪ್ರಭುತ್ವದ ರಕ್ಷಣೆಗಾಗಿ ಜನರನ್ನು ಸಾರ್ವಜನಿಕ ಹೋರಾಟಗಳಿಗೆ ಸಂಘಟಿಸುವುದು ಈ ಆಂದೋಲನದ ಉದ್ದೇಶ.

ಈ ಜನಾಂದೋಲನವು ಪ್ರತಿಪಕ್ಷಗಳ ಸಂಘಟನೆಯ ಅಡಿಪಾಯ ಆಗಬಲ್ಲದು. ಹೊಸ ಕಾರ್ಯಕರ್ತರನ್ನು ರೂಪಿಸಿ ಜನತೆಯೊಂದಿಗೆ ನೇರ ಸಂಪರ್ಕಕ್ಕೆ ದಾರಿ ಮಾಡಬಹುದಾಗಿದೆ. ಈ ಪ್ರತಿಭಟನೆಯನ್ನು ಕಾಯಂ ಸಂಘಟನೆಯಾಗಿ ಪರಿವರ್ತಿಸಬೇಕಿದೆ.

ಮತಗಳ್ಳತನದ ವಿರುದ್ಧದ ಹೋರಾಟಕ್ಕೊಂದು ಹೊಸ ತಿರುವು ನೀಡಬಲ್ಲ ಜನಸ್ತೋಮದ ಸಭೆಯಿದು. ಆದರೆ ಮತದಾನದ ಹಕ್ಕು ಪಕ್ಷಗಳ ಸಮಸ್ಯೆಯಷ್ಟೇ ಅಲ್ಲ, ಅದು ನಾಗರಿಕರ ಮೂಲಭೂತ ಜನತಾಂತ್ರಿಕ ಹಕ್ಕಿನ ಅಪಹರಣವೂ ಹೌದು. ಹೀಗಾಗಿ ಹೋರಾಟದ ನಂತರ ಪಕ್ಷಗಳ ಸಂಘಟನೆಗಳನ್ನು ಬಲಿಷ್ಠವಾಗಿ ಕಟ್ಟುವುದು ಪ್ರತಿಪಕ್ಷಗಳ ಮುಂದಿರುವ ದೊಡ್ಡ ಸವಾಲು.

ಜೊತೆಗೆ ಮೋಶಾ ಪಕ್ಷದ ಹಣಬಲ, ಮಾಧ್ಯಮಗಳ ಪ್ರಭಾವ, ತನಿಖಾ ಸಂಸ್ಥೆಗಳ ದುರ್ಬಳಕೆ, ಚುನಾವಣಾ ಆಯೋಗದಂತಹ ಸಂವಿಧಾನಾತ್ಮಕ ಸ್ವಾಯತ್ತ ಸಂಸ್ಥೆಗಳ ಬೆನ್ನು ಮೂಳೆ ಮುರಿತದ ಮುಂದೆ ಪ್ರತಿಪಕ್ಷಗಳು ಈಗಲೂ ದುರ್ಬಲವೇ. ತಮ್ಮ ಎಲ್ಲ ನೈತಿಕ ಮತ್ತು ಆರ್ಥಿಕ ಶಕ್ತಿಯನ್ನು ಅವು ಜನತೆಯಿಂದಲೇ ಪಡೆಯಬೇಕು. ಹೀಗೆ ಪಡೆಯಲು ಪ್ರಾಮಾಣಿಕವಾಗಿ ಶ್ರಮಿಸಬೇಕು. ಜನಾಂದೋಲನವು ಬೇರು ಮಟ್ಟ ತಲುಪಬೇಕು. ಪರಿಣಾಮವಾಗಿ ಹುಟ್ಟುವ ಪ್ರಚಂಡ ಜನಶಕ್ತಿ ಮಾತ್ರವೇ ಸರ್ವಾಧಿಕಾರಿ ಶಕ್ತಿಗಳನ್ನು ಧೂಳೀಪಟ ಮಾಡಬಲ್ಲದು.

ಪ್ರತಿಪಕ್ಷಗಳು ಮತದಾರರ ಮುಂದೆ ಪರ್ಯಾಯ ನೀತಿ ನಿರ್ಧಾರಗಳನ್ನು ಇಡಬೇಕು. ನಾಯಕತ್ವಗಳು ವಿಶ್ವಾಸಾರ್ಹ ಎನಿಸಿಕೊಳ್ಳಬೇಕು. ಸಮಸ್ಯೆಗಳಿಗೆ ಪರಿಹಾರಗಳನ್ನೂ ಮಂಡಿಸಬೇಕು.

ಪ್ರತಿಪಕ್ಷಗಳು ಬೀದಿ ಹೋರಾಟಗಳಲ್ಲಿ ಮುಳುಗಿ ಚುನಾವಣೆ ಸಂಘಟನೆಯನ್ನು ನಿರ್ಲಕ್ಷಿಸಬಾರದು. ಜನತಂತ್ರವನ್ನು ಕಾಪಾಡುವ ಆಂದೋಲನ ಮತ್ತು ಸರ್ವಾಧಿಕಾರಕ್ಕೆ ಪರ್ಯಾಯವನ್ನು ಕಟ್ಟುವ ಕೆಲಸ ಒಟ್ಟೊಟ್ಟಿಗೇ ನಡೆಯಬೇಕು.

ಪ್ರತಿಪಕ್ಷಗಳು ಈಗಿರುವ ಚುನಾವಣಾ ನಿಯಮಗಳ ಅಡಿಯಲ್ಲೇ ಅಧಿಕಾರಕ್ಕಾಗಿ ಸ್ಪರ್ಧಿಸುವ ಜೊತೆ ಜೊತೆಗೆ ಅದೇ ಚುನಾವಣಾ ವ್ಯವಸ್ಥೆಯ ವಿಶ್ವಾಸಾರ್ಹತೆಯನ್ನು ಪ್ರಶ್ನಿಸುತ್ತಿವೆ. ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗಾಗಿ ನಿಯಮಗಳ ಸುಧಾರಣೆಗೆ ಆಗ್ರಹಿಸತೊಡಗಿವೆ. ಅತ್ಯಂತ ನ್ಯಾಯಬದ್ಧ ಹೋರಾಟವಿದು.

ಪ್ರತಿಪಕ್ಷಗಳ ಸಂಘಟನಾ ಸಂಪನ್ಮೂಲಗಳು ಅತ್ಯಂತ ಸೀಮಿತ. ಮೋಶಾ ಸರ್ಕಾರ ಅವುಗಳನ್ನು ಅಕ್ರಮವಾಗಿ ಹಿಂಡಿ ಹಾಕಿದೆ.

1975ರ ಜೂನ್ 25ರಂದು ದೆಹಲಿಯ ರಾಮಲೀಲಾ ಮೈದಾನದಲ್ಲಿ ಬೃಹತ್ ಪ್ರತಿಭಟನಾ ಸಮಾವೇಶ ನಡೆಯಿತು. ಪ್ರಧಾನಿ ಇಂದಿರಾ ಗಾಂಧಿ ಸರ್ಕಾರದ ವಿರುದ್ಧ ನಡೆದ ಈ ಹೋರಾಟಕ್ಕೆ ಲೋಕನಾಯಕ ಜಯಪ್ರಕಾಶ್ ನಾರಾಯಣ್ (ಜೆಪಿ) ನೇತೃತ್ವ ವಹಿಸಿದ್ದರು.

1975ರ ಜೂನ್ 12ರಂದು ಅಲಹಾಬಾದ್ ಹೈಕೋರ್ಟ್ ಇಂದಿರಾ ಗಾಂಧಿಯವರ 1971ರ ಲೋಕಸಭಾ ಚುನಾವಣೆಯನ್ನು ಅಸಿಂಧುಗೊಳಿಸಿತು.

ಚುನಾವಣಾ ಅಕ್ರಮಗಳ ಹಿನ್ನೆಲೆಯಲ್ಲಿ ಈ ತೀರ್ಪು ಹೊರಬಿದ್ದಿತ್ತು. ಇಂದಿರಾ ಗಾಂಧಿ ಪ್ರಧಾನಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ವಿರೋಧ ಪಕ್ಷಗಳು ಆಗ್ರಹಿಸಿದವು. ಜೂನ್ 24ರಂದು ಸುಪ್ರೀಂ ಕೋರ್ಟ್ ಷರತ್ತುಬದ್ಧ ತಡೆಯಾಜ್ಞೆ ನೀಡಿತು. ಮರುದಿನವೇ ದೆಹಲಿಯಲ್ಲಿ ಬೃಹತ್ ಪ್ರತಿಭಟನೆ ನಡೆಯಿತು. ಸುಮಾರು ಒಂದು ಲಕ್ಷ ಜನ ರಾಮಲೀಲಾ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು ಎಂದು ವರದಿಗಳು ಹೇಳುತ್ತವೆ.

ಜಯಪ್ರಕಾಶ್ ನಾರಾಯಣ್ ಮೂರು ಪ್ರಮುಖ ಕರೆಗಳನ್ನು ನೀಡಿದ್ದರು. ಇಂದಿರಾ ಗಾಂಧಿ ಪ್ರಧಾನಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ದೇಶಾದ್ಯಂತ ಅಹಿಂಸಾತ್ಮಕ ಸತ್ಯಾಗ್ರಹ ನಡೆಸಬೇಕು. ಪೊಲೀಸರು ಮತ್ತು ಸೈನಿಕರು ಕಾನೂನುಬಾಹಿರ ಆದೇಶಗಳನ್ನು ಪಾಲಿಸಬಾರದು.

''ಸಿಂಹಾಸನ ಖಾಲಿ ಮಾಡಿ, ಜನತೆ ಬರುತ್ತಿದ್ದಾರೆ!'' ಎಂಬ ಪ್ರಸಿದ್ಧ ಘೋಷಣೆಯನ್ನು ಸಮಾವೇಶದಲ್ಲಿ ಜೆಪಿ ಮೊಳಗಿಸಿದರು. ಈ ಭಾಷಣದ ವಿರುದ್ಧ ಇಂದಿರಾ ಗಾಂಧಿ ಸರ್ಕಾರ ತೀವ್ರ ಆಕ್ಷೇಪ ವ್ಯಕ್ತಪಡಿಸಿತ್ತು. ಇಂದಿನ ಮೋದಿ ಸರ್ಕಾರ ಕೂಡ ಭಾನುವಾರದ ಪ್ರತಿಪಕ್ಷಗಳ ರ್ಯಾಲಿಯ ಮೇಲೆ ಕಟು ದಾಳಿ ನಡೆಸಿದೆ.

ಪ್ರತಿಭಟನೆಯ ನಂತರ ಜೂನ್ 25ರ ರಾತ್ರಿ ದೇಶದಲ್ಲಿ ತುರ್ತು ಪರಿಸ್ಥಿತಿ ಘೋಷಿಸಲಾಯಿತು. ಜಯಪ್ರಕಾಶ್ ನಾರಾಯಣ್ ಸೇರಿದಂತೆ ಪ್ರಮುಖ ವಿರೋಧ ಪಕ್ಷಗಳ ನಾಯಕರನ್ನು ಬಂಧಿಸಲಾಯಿತು. ಪತ್ರಿಕಾ ಸ್ವಾತಂತ್ರ್ಯದ ಮೇಲೆ ಸೆನ್ಸಾರ್‌ಶಿಪ್ ಹೇರಲಾಯಿತು. ನಾಗರಿಕರ ಮೂಲಭೂತ ಹಕ್ಕುಗಳ ಜಾರಿಗೆ ಗಂಭೀರ ನಿರ್ಬಂಧ ವಿಧಿಸಲಾಯಿತು. ಪ್ರತಿಭಟನೆಗಳು ಮತ್ತು ರಾಜಕೀಯ ಚಟುವಟಿಕೆಗಳನ್ನು ವ್ಯಾಪಕವಾಗಿ ನಿರ್ಬಂಧಿಸಲಾಯಿತು.

ತುರ್ತು ಪರಿಸ್ಥಿತಿಯ ನಂತರ ರಚನೆಯಾದ ಶಾ ತನಿಖಾ ಆಯೋಗ ಮಹತ್ವದ ಅಂಶಗಳನ್ನು ದಾಖಲಿಸಿತು. ತುರ್ತು ಪರಿಸ್ಥಿತಿ ಘೋಷಿಸಲು ಅಗತ್ಯವಾದ ಪರಿಸ್ಥಿತಿ ಇತ್ತು ಎಂಬುದಕ್ಕೆ ಸಮರ್ಪಕ ಪುರಾವೆಗಳಿರಲಿಲ್ಲ ಎಂದು ಆಯೋಗ ಅಭಿಪ್ರಾಯಪಟ್ಟಿತು.

ಜೂನ್ 25ಕ್ಕೂ ಮೊದಲೇ ತುರ್ತು ಪರಿಸ್ಥಿತಿ ಜಾರಿಗೊಳಿಸುವ ಸಿದ್ಧತೆ ನಡೆದಿತ್ತು ಎಂಬುದನ್ನೂ ಆಯೋಗ ದಾಖಲಿಸಿತು. 1975ರ ಜೂನ್ 25ರಂದು ರಾಮಲೀಲಾ ಮೈದಾನದಲ್ಲಿ ನಡೆದ ಪ್ರತಿಭಟನೆ ಭಾರತದ ರಾಜಕೀಯ ಇತಿಹಾಸದ ಮಹತ್ವದ ಘಟನೆಯಾಯಿತು.

21 ತಿಂಗಳ ಕಾಲ ತುರ್ತು ಪರಿಸ್ಥಿತಿ ಜಾರಿಯಲ್ಲಿತ್ತು. 1977ರ ಮಾರ್ಚ್‌ನಲ್ಲಿ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ ಇಂದಿರಾ ಗಾಂಧಿ ನೇತೃತ್ವದ ಕಾಂಗ್ರೆಸ್ ಸರ್ಕಾರ ಸೋತಿತು. ಮೊರಾರ್ಜಿ ದೇಸಾಯಿ ನೇತೃತ್ವದಲ್ಲಿ ಜನತಾ ಪಕ್ಷದ ಸರ್ಕಾರ ಅಧಿಕಾರಕ್ಕೆ ಬಂತು.

ಅಂದು ಆರೆಸ್ಸೆಸ್ ಮತ್ತು ಜನಸಂಘ (ಇಂದಿನ ಬಿಜೆಪಿ) ಹಾಗೂ ಸಂಘಪರಿವಾರದ ಇತರೆ ಸಂಘಟನೆಗಳು ಜೆಪಿ ಜೊತೆ ಕೈ ಜೋಡಿಸಿದ್ದವು. ಇಂದು ಮೋದಿ ಸರ್ಕಾರದೊಂದಿಗೆ ನಿಂತಿವೆ. ಮೋದಿ ಸರ್ಕಾರ ಅಧಿಕಾರದ ಅಮಲನ್ನು ತಲೆಗೇರಿಸಿಕೊಂಡು, ಅದನ್ನು ಉಳಿಸಿಕೊಳ್ಳಲು ಯಾವುದೇ ಅಕ್ರಮ-ಅನೈತಿಕ ಪಾತಾಳಕ್ಕೆ ಕುಸಿಯಬಲ್ಲದು ಎಂಬುದನ್ನು ಈಗಾಗಲೇ ಸಂಶಯಕ್ಕೆ ಎಡೆಯಿಲ್ಲದಂತೆ ತೋರಿಸಿಕೊಟ್ಟಿದೆ.

ಮೋಶಾ ಆಡಳಿತದಲ್ಲಿ ಭಾರತ ಈಗಾಗಲೇ ಚುನಾವಣೆ ವ್ಯವಸ್ಥೆಯುಳ್ಳ ಸರ್ವಾಧಿಕಾರಿ ದೇಶವಾಗಿ ಬದಲಾಗಿದೆ. ಜನತಂತ್ರ ನಿರಂತರ ಇಳಿಜಾರಿನ ಹಾದಿಯಲ್ಲಿದೆ. ನಾಗರಿಕರ ಮೂಲಭೂತ ಹಕ್ಕುಗಳು ಸತತವಾಗಿ ಸವೆಯುತ್ತಿವೆ.

1975ರಲ್ಲಿ ಜೆಪಿ ನೇತೃತ್ವದಲ್ಲಿ ಶುರುವಾದ ಅಂತಹುದೇ ಆಂದೋಲನಕ್ಕೆ ಭಾನುವಾರದ ರಾಮಲೀಲಾ ಮೈದಾನದ ರ್ಯಾಲಿ ಅಡಿಗಲ್ಲು ಇರಿಸಿದೆ. ಈ ಅಡಿಗಲ್ಲಿನ ಮೇಲೆ ಜನತಂತ್ರವನ್ನು ಪುನಃ ಬಲಿಷ್ಠವಾಗಿ ಕಟ್ಟಬೇಕಿದೆ.

ಹಾಲು, ಮೊಸರು, ದಿನಸಿ ದರ ಏರಿಕೆ ಬೆನ್ನಲ್ಲೇ ಬಸ್ ಪ್ರಯಾಣವೂ ದುಬಾರಿ! ಕಂಗೆಟ್ಟ ಜನಸಾಮಾನ್ಯರು



ಹಾಲು, ಮೊಸರು, ದಿನಸಿ ವಸ್ತುಗಳ ದರ ಹೆಚ್ಚಳದ ಹೊರೆಯ ನಡುವೆ, ಬಸ್ ಪ್ರಯಾಣವೂ ದುಬಾರಿಯಾದರೆ ಬದುಕು ಮತ್ತಷ್ಟು ದುಸ್ತರವಾಗಲಿದೆ. ಕರ್ನಾಟಕದಲ್ಲಿ ದಿನನಿತ್ಯದ ಅಗತ್ಯ ವಸ್ತುಗಳ ಬೆಲೆ ಏರಿಕೆ ಕುರಿತು ಸಾರ್ವಜನಿಕರಲ್ಲಿ ಅಸಮಾಧಾನದ ಹೊಗೆಯಾಡಿದ್ದು, ಕುಟುಂಬದ ಬಜೆಟ್ ಮೇಲೆ ಹೆಚ್ಚುತ್ತಿರುವ ಹೊರೆ - ಸಾರಿಗೆ ದರ ಏರಿಕೆಯ ಪ್ರಸ್ತಾಪದಿಂದ ಜನರಲ್ಲಿ ಆತಂಕ ಉಂಟಾಗಿದೆ.

ನವೆಂಬರ್ 1ರಿಂದ ನಂದಿನಿ ಹಾಲಿನ ದರ ಪ್ರತಿ ಲೀಟರ್‌ಗೆ ಕನಿಷ್ಠ ₹8 ಹೆಚ್ಚಳವಾಗಿದೆ. ಟೋನ್ಡ್ ಹಾಲಿನ ದರ ₹46ರಿಂದ ₹54ಕ್ಕೆ ಏರಿಕೆಯಾಗಿದೆ. ಹಾಲಿನ ಪ್ರಕಾರಕ್ಕೆ ಅನುಗುಣವಾಗಿ ₹8ರಿಂದ ₹12ರವರೆಗೆ ಹೆಚ್ಚಳವಿದೆ. ಮೊಸರಿನ ದರದಲ್ಲೂ ಏರಿಕೆಯಾಗಿದೆ. ನವೆಂಬರ್ 5ರಿಂದ ದರ ಹೆಚ್ಚಳ ಮಾಡುವುದಾಗಿ ಸಾರಿಗೆ ಸಚಿವರು ತಿಳಿಸಿದ್ದಾರೆ. ನವೆಂಬರ್ 4ರಂದು ಪರಿಷ್ಕೃತ ದರದ ಅಂತಿಮ ನಿರ್ಧಾರವಾಗುವ ನಿರೀಕ್ಷೆಯಿದೆ.

ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಜೀವನ ವೆಚ್ಚದ ನಡುವೆ ಜನಸಾಮಾನ್ಯರು ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿದ್ದಾರೆ. ಕುಟುಂಬದ ಪ್ರತಿಯೊಬ್ಬ ಸದಸ್ಯನ ದಿನನಿತ್ಯದ ಬದುಕಿಗೆ ಅನಿವಾರ್ಯವಾಗಿರುವ ಹಾಲು, ಮೊಸರು ಸೇರಿದಂತೆ ಅಗತ್ಯ ಆಹಾರ ಪದಾರ್ಥಗಳ ಬೆಲೆ ಏರಿಕೆಯ ಹೊರೆ ಸಾಮಾನ್ಯ ಕುಟುಂಬಗಳ ಬಜೆಟ್ ಮೇಲೆ ಪರಿಣಾಮ ಬೀರುತ್ತಿದೆ. ಇದರ ಬೆನ್ನಲ್ಲೇ ಸಕ್ಕರೆ, ಬೇಳೆಕಾಳು, ಅಡುಗೆ ಎಣ್ಣೆ ಸೇರಿದಂತೆ ದಿನಸಿ ವಸ್ತುಗಳ ಬೆಲೆಗಳ ಏರಿಕೆಯೂ ಗ್ರಾಹಕರಲ್ಲಿ ಆತಂಕ ಮೂಡಿಸಿದೆ. ಮತ್ತೊಂದೆಡೆ, ಮುಂದಿನ ದಿನಗಳಲ್ಲಿ ಸರ್ಕಾರಿ ಸ್ವಾಮ್ಯದ ಸಾರಿಗೆ ಬಸ್‌ಗಳ ಪ್ರಯಾಣ ದರವೂ ಹೆಚ್ಚಳವಾಗುವ ಸಾಧ್ಯತೆ ಕುರಿತು ಚರ್ಚೆಗಳು ನಡೆಯುತ್ತಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಮತ್ತಷ್ಟು ಕಾರಣವಾಗಿದೆ.

ದಿನನಿತ್ಯದ ಹಾಲು, ಮೊಸರಿಗೂ ಬೆಲೆ ಏರಿಕೆಯ ಬಿಸಿ ತಟ್ಟಿದ್ದು, ಹಾಲು ಮತ್ತು ಮೊಸರು ಪ್ರತಿಯೊಂದು ಮನೆಯಲ್ಲೂ ದಿನನಿತ್ಯ ಬಳಕೆಯಾಗುವ ಪ್ರಮುಖ ಆಹಾರ ಪದಾರ್ಥಗಳು. ಮಕ್ಕಳಿಂದ ಹಿಡಿದು ವೃದ್ಧರವರೆಗೆ ಎಲ್ಲರಿಗೂ ಅಗತ್ಯವಾಗಿರುವ ಹಾಲಿನ ಬೆಲೆಯಲ್ಲಿ ಏರಿಕೆಯಾದರೆ ಅದರ ಪರಿಣಾಮ ನೇರವಾಗಿ ಕುಟುಂಬದ ಮಾಸಿಕ ಖರ್ಚಿನ ಮೇಲೆ ಬೀಳುತ್ತದೆ. ಪ್ರತಿದಿನ ಹಾಲು ಖರೀದಿಸುವ ಮಧ್ಯಮ ವರ್ಗದ ಕುಟುಂಬಗಳು, ಕೂಲಿ ಕಾರ್ಮಿಕರು, ಸಣ್ಣ ನೌಕರರು ಹಾಗೂ ಸೀಮಿತ ಆದಾಯ ಹೊಂದಿರುವ ಕುಟುಂಬಗಳಿಗೆ ಇದು ಹೆಚ್ಚುವರಿ ಹೊರೆಯಾಗಲಿದೆ.

ಹಾಲಿನ ಬೆಲೆ ಏರಿಕೆಯು ಕೇವಲ ಒಂದು ಉತ್ಪನ್ನದ ಬೆಲೆ ಹೆಚ್ಚಳವಾಗಿ ಉಳಿಯುವುದಿಲ್ಲ. ಹೋಟೆಲ್‌ಗಳು, ಟೀ ಅಂಗಡಿಗಳು, ಕಾಫಿ ಶಾಪ್‌ಗಳು, ಬೇಕರಿಗಳು ಮತ್ತು ಸಣ್ಣ ಆಹಾರ ಮಳಿಗೆಗಳ ಮೇಲೂ ಪರಿಣಾಮ ಬೀರುವ ಸಾಧ್ಯತೆಯಿದೆ. ಹಾಲು ಮತ್ತು ಮೊಸರನ್ನು ಆಧರಿಸಿ ತಯಾರಿಸುವ ವಿವಿಧ ಆಹಾರ ಪದಾರ್ಥಗಳ ಬೆಲೆಯಲ್ಲಿಯೂ ಬದಲಾವಣೆ ಕಂಡುಬರಬಹುದು. ಇದರಿಂದ ಅಂತಿಮವಾಗಿ ಗ್ರಾಹಕರೇ ಹೆಚ್ಚುವರಿ ಹಣ ಪಾವತಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತದೆ.

ಸಕ್ಕರೆ, ಬೇಳೆಕಾಳು: ಕುಟುಂಬದ ಅಡುಗೆ ಮನೆಯ ಖರ್ಚಿನಲ್ಲಿ ಅಕ್ಕಿ, ಬೇಳೆ, ಸಕ್ಕರೆ, ಅಡುಗೆ ಎಣ್ಣೆ, ಉಪ್ಪು ಹಾಗೂ ಇತರ ದಿನಸಿ ವಸ್ತುಗಳಿಗೆ ಪ್ರಮುಖ ಸ್ಥಾನವಿದೆ. ಇವುಗಳಲ್ಲಿ ಯಾವುದಾದರೂ ಒಂದು ವಸ್ತುವಿನ ಬೆಲೆ ಹೆಚ್ಚಾದರೂ ಕುಟುಂಬದ ಮಾಸಿಕ ವೆಚ್ಚದಲ್ಲಿ ವ್ಯತ್ಯಾಸವಾಗುತ್ತದೆ. ಇನ್ನು ಹಲವು ಅಗತ್ಯ ವಸ್ತುಗಳ ಬೆಲೆ ಏರಿಕೆಯಾದರೆ ಸಾಮಾನ್ಯ ಕುಟುಂಬಗಳ ಆರ್ಥಿಕ ನಿರ್ವಹಣೆ ಮತ್ತಷ್ಟು ಕಷ್ಟಕರವಾಗುತ್ತದೆ.ವಿಶೇಷವಾಗಿ ಬೇಳೆಕಾಳು ಮತ್ತು ಅಡುಗೆ ಎಣ್ಣೆಯ ಬೆಲೆ ಏರಿಕೆಯು ಮಧ್ಯಮ ಹಾಗೂ ಬಡ ವರ್ಗದ ಜನರ ಮೇಲೆ ಹೆಚ್ಚಿನ ಪರಿಣಾಮ ಬೀರುತ್ತದೆ.

ದಿನನಿತ್ಯದ ಅಡುಗೆಯಲ್ಲಿ ಅನಿವಾರ್ಯವಾಗಿರುವ ಈ ವಸ್ತುಗಳನ್ನು ಖರೀದಿಸುವುದನ್ನು ಸಂಪೂರ್ಣವಾಗಿ ನಿಲ್ಲಿಸಲು ಸಾಧ್ಯವಿಲ್ಲ. ಹೀಗಾಗಿ ಬೆಲೆ ಹೆಚ್ಚಾದರೂ ಅನಿವಾರ್ಯವಾಗಿ ಖರೀದಿಸಬೇಕಾದ ಸ್ಥಿತಿ ಗ್ರಾಹಕರದ್ದಾಗಿದೆ.ಇದರ ಪರಿಣಾಮವಾಗಿ ಕುಟುಂಬಗಳು ಇತರ ಖರ್ಚುಗಳನ್ನು ಕಡಿತಗೊಳಿಸುವ ಅನಿವಾರ್ಯತೆಗೆ ಸಿಲುಕಬಹುದು. ಮಕ್ಕಳ ಶಿಕ್ಷಣ, ಆರೋಗ್ಯ, ಬಟ್ಟೆ, ಮನೆ ಬಾಡಿಗೆ, ವಿದ್ಯುತ್ ಬಿಲ್ ಹಾಗೂ ಇತರ ಅಗತ್ಯಗಳಿಗಾಗಿ ಮೀಸಲಿಡುವ ಹಣದಲ್ಲಿಯೂ ಕಡಿತ ಮಾಡಬೇಕಾದ ಪರಿಸ್ಥಿತಿ ಎದುರಾಗಬಹುದು.

ಸಾರಿಗೆ ಬಸ್ ದರ ಏರಿಕೆಯಾದರೆ ಪ್ರಯಾಣಿಕರ ಗತಿಯೇನು?

ಸಾರ್ವಜನಿಕ ಸಾರಿಗೆ ವ್ಯವಸ್ಥೆ ಲಕ್ಷಾಂತರ ಜನರ ದೈನಂದಿನ ಬದುಕಿನ ಅವಿಭಾಜ್ಯ ಅಂಗವಾಗಿದೆ. ಉದ್ಯೋಗಿಗಳು, ವ್ಯಾಪಾರಿಗಳು, ರೈತರು ಹಾಗೂ ಗ್ರಾಮೀಣ ಭಾಗದ ಜನರು ತಮ್ಮ ದೈನಂದಿನ ಪ್ರಯಾಣಕ್ಕಾಗಿ ಸರ್ಕಾರಿ ಸಾರಿಗೆ ಬಸ್‌ಗಳನ್ನೇ ಅವಲಂಬಿಸಿದ್ದಾರೆ.ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಸಂಕಷ್ಟ ಎದುರಿಸುತ್ತಿರುವ ಜನರಿಗೆ ಬಸ್ ಪ್ರಯಾಣ ದರವೂ ಹೆಚ್ಚಳವಾದರೆ ಮತ್ತೊಂದು ಆರ್ಥಿಕ ಹೊರೆ ಎದುರಾಗಲಿದೆ. ಪ್ರತಿದಿನ ಕೆಲಸಕ್ಕೆ ಹೋಗುವ ಕಾರ್ಮಿಕರು ಹಾಗೂ ಉದ್ಯೋಗಿಗಳಿಗೆ ಮಾಸಿಕ ಪ್ರಯಾಣ ವೆಚ್ಚ ಹೆಚ್ಚಾಗಲಿದೆ. ವಿಶೇಷವಾಗಿ ಗ್ರಾಮೀಣ ಪ್ರದೇಶಗಳಿಂದ ನಗರಗಳಿಗೆ ಉದ್ಯೋಗ, ಶಿಕ್ಷಣ ಮತ್ತು ವೈದ್ಯಕೀಯ ಅಗತ್ಯಗಳಿಗಾಗಿ ಬರುವ ಜನರಿಗೆ ಸಾರಿಗೆ ವೆಚ್ಚ ಹೆಚ್ಚಳವು ಹೆಚ್ಚಿನ ಹೊರೆಯಾಗಬಹುದು.

ಕುಟುಂಬದಲ್ಲಿ ಇಬ್ಬರು ಅಥವಾ ಮೂವರು ಸದಸ್ಯರು ಪ್ರತಿದಿನ ಬಸ್ ಪ್ರಯಾಣ ಮಾಡುತ್ತಿದ್ದರೆ ಒಟ್ಟಾರೆ ಮಾಸಿಕ ವೆಚ್ಚದಲ್ಲಿ ಗಮನಾರ್ಹ ವ್ಯತ್ಯಾಸ ಉಂಟಾಗಬಹುದು.

ಮಧ್ಯಮ ವರ್ಗದ ಕುಟುಂಬಗಳ ಬದುಕು ಹೇಗೆ ಸಾಗಬೇಕು?

ಬೆಲೆ ಏರಿಕೆಯ ಹೊರೆ ಹೆಚ್ಚಾದಾಗ ಮೊದಲು ಸಂಕಷ್ಟಕ್ಕೆ ಸಿಲುಕುವುದು ಮಧ್ಯಮ ವರ್ಗದ ಕುಟುಂಬಗಳು. ನಿಗದಿತ ಸಂಬಳ ಅಥವಾ ಸೀಮಿತ ಆದಾಯದಲ್ಲಿ ಮನೆ ನಿರ್ವಹಣೆ ಮಾಡುವವರಿಗೆ ಪ್ರತಿಯೊಂದು ರೂಪಾಯಿಯೂ ಮಹತ್ವದ್ದಾಗಿದೆ. ಮನೆ ಬಾಡಿಗೆ, ಮಕ್ಕಳ ಶಾಲಾ ಶುಲ್ಕ, ದಿನಸಿ ಸಾಮಗ್ರಿಗಳು, ವಿದ್ಯುತ್ ಬಿಲ್, ಔಷಧೋಪಚಾರ, ವಾಹನ ಇಂಧನ ಮತ್ತು ಸಾರಿಗೆ ವೆಚ್ಚಗಳನ್ನು ನಿಭಾಯಿಸುವುದೇ ಈಗ ದೊಡ್ಡ ಸವಾಲಾಗಿದೆ. ಇಂತಹ ಸಂದರ್ಭದಲ್ಲಿ ಅಗತ್ಯ ವಸ್ತುಗಳ ಬೆಲೆ ಮತ್ತಷ್ಟು ಏರಿಕೆಯಾದರೆ ಆದಾಯ ಮತ್ತು ಖರ್ಚಿನ ನಡುವಿನ ಅಂತರ ಹೆಚ್ಚಾಗುತ್ತದೆ. ಸಂಬಳದಲ್ಲಿ ತಕ್ಷಣದ ಹೆಚ್ಚಳವಿಲ್ಲದೆ ದಿನನಿತ್ಯದ ಖರ್ಚುಗಳು ಮಾತ್ರ ಹೆಚ್ಚಾಗುತ್ತಿದ್ದರೆ ಕುಟುಂಬಗಳ ಉಳಿತಾಯದ ಪ್ರಮಾಣ ಕಡಿಮೆಯಾಗುತ್ತದೆ. ಕೆಲವರು ಅನಿವಾರ್ಯ ವೆಚ್ಚಗಳನ್ನು ನಿಭಾಯಿಸಲು ಸಾಲದ ಮೊರೆ ಹೋಗುವ ಪರಿಸ್ಥಿತಿಯೂ ನಿರ್ಮಾಣವಾಗಬಹುದು.

ಹೀಗಾಗಿ ಬೆಲೆ ಏರಿಕೆ ಕೇವಲ ಮಾರುಕಟ್ಟೆಯ ವಿಚಾರವಲ್ಲ, ಅದು ಪ್ರತಿಯೊಂದು ಕುಟುಂಬದ ಆರ್ಥಿಕ ಭದ್ರತೆಗೆ ಸಂಬಂಧಿಸಿದ ಗಂಭೀರ ವಿಷಯವಾಗಿದೆ.

ಸಣ್ಣ ವ್ಯಾಪಾರಿಗಳು ಮತ್ತು ಹೋಟೆಲ್ ಉದ್ಯಮಕ್ಕೂ ಪರಿಣಾಮಬೆಲೆ ಏರಿಕೆಯ ಪರಿಣಾಮ ಗ್ರಾಹಕರಿಗೆ ಮಾತ್ರ ಸೀಮಿತವಾಗಿರುವುದಿಲ್ಲ. ಸಣ್ಣ ಹೋಟೆಲ್‌ಗಳು, ಟೀ ಅಂಗಡಿಗಳು, ಬೇಕರಿಗಳು, ಕ್ಯಾಂಟೀನ್‌ಗಳು ಮತ್ತು ಬೀದಿ ಬದಿ ವ್ಯಾಪಾರಿಗಳ ಮೇಲೂ ಇದರ ಪ್ರಭಾವ ಬೀರುತ್ತದೆ.ಹಾಲು, ಸಕ್ಕರೆ, ಅಡುಗೆ ಎಣ್ಣೆ, ಬೇಳೆಕಾಳು ಸೇರಿದಂತೆ ಅಡುಗೆಗೆ ಬೇಕಾಗುವ ವಸ್ತುಗಳ ಖರೀದಿ ವೆಚ್ಚ ಹೆಚ್ಚಾದರೆ ವ್ಯಾಪಾರಿಗಳ ನಿರ್ವಹಣಾ ವೆಚ್ಚವೂ ಏರಿಕೆಯಾಗುತ್ತದೆ.

ಈ ಹೆಚ್ಚುವರಿ ವೆಚ್ಚವನ್ನು ಗ್ರಾಹಕರಿಗೆ ವರ್ಗಾಯಿಸಿದರೆ ತಿಂಡಿ, ಊಟ, ಚಹಾ ಮತ್ತು ಇತರ ಆಹಾರ ಪದಾರ್ಥಗಳ ಬೆಲೆಯೂ ಹೆಚ್ಚಾಗಬಹುದು. ಬೆಲೆ ಹೆಚ್ಚಿಸಿದರೆ ಗ್ರಾಹಕರ ಸಂಖ್ಯೆ ಕಡಿಮೆಯಾಗುವ ಆತಂಕವೂ ವ್ಯಾಪಾರಿಗಳಲ್ಲಿದೆ. ಹೀಗೆ ಉತ್ಪಾದಕರಿಂದ ಹಿಡಿದು ವ್ಯಾಪಾರಿಗಳು ಮತ್ತು ಗ್ರಾಹಕರವರೆಗೆ ಬೆಲೆ ಏರಿಕೆಯ ಪರಿಣಾಮ ಸರಪಳಿಯಂತೆ ಮುಂದುವರಿಯುತ್ತದೆ.

ಸರ್ಕಾರದ ಮುಂದಿರುವ ಸವಾಲು: ಜನರ ಹಿತವೇ ಮೊದಲ ಆದ್ಯತೆಯಾಗಬೇಕಲ್ಲವೇ?

ಸರ್ಕಾರ ಯಾವುದೇ ಬೆಲೆ ಪರಿಷ್ಕರಣೆ ಅಥವಾ ಸಾರಿಗೆ ದರ ಹೆಚ್ಚಳದ ನಿರ್ಧಾರ ಕೈಗೊಳ್ಳುವಾಗ ಅದರ ಆರ್ಥಿಕ ಮತ್ತು ಸಾಮಾಜಿಕ ಪರಿಣಾಮಗಳನ್ನು ಸಮಗ್ರವಾಗಿ ಪರಿಶೀಲಿಸಬೇಕಾದ ಜವಾಬ್ದಾರಿ ಹೊಂದಿದೆ. ಉತ್ಪಾದನಾ ವೆಚ್ಚ, ನಿರ್ವಹಣಾ ವೆಚ್ಚ, ಹಣಕಾಸಿನ ಒತ್ತಡ ಮುಂತಾದ ಕಾರಣಗಳನ್ನು ಸರ್ಕಾರ ಪರಿಗಣಿಸಬಹುದು. ಆದರೆ ಅದರ ಭಾರವನ್ನು ಸಂಪೂರ್ಣವಾಗಿ ಸಾಮಾನ್ಯ ಜನರ ಮೇಲೆ ವರ್ಗಾಯಿಸುವುದು ಸೂಕ್ತವೇ ಎಂಬ ಪ್ರಶ್ನೆಯೂ ಉದ್ಭವಿಸುತ್ತದೆ. ಜನಸಾಮಾನ್ಯರ ಅಭಿಪ್ರಾಯದಲ್ಲಿ, ಅಗತ್ಯ ವಸ್ತುಗಳ ಬೆಲೆ ನಿಯಂತ್ರಣಕ್ಕೆ ಸೂಕ್ತ ಕ್ರಮಗಳನ್ನು ಕೈಗೊಳ್ಳುವುದು, ಸಾರ್ವಜನಿಕ ವಿತರಣಾ ವ್ಯವಸ್ಥೆಯನ್ನು ಬಲಪಡಿಸುವುದು, ಮಾರುಕಟ್ಟೆಯಲ್ಲಿ ಕೃತಕ ಬೆಲೆ ಏರಿಕೆಗೆ ಕಡಿವಾಣ ಹಾಕುವುದು ಹಾಗೂ ಸಾರಿಗೆ ವ್ಯವಸ್ಥೆಯ ಆರ್ಥಿಕ ನಿರ್ವಹಣೆಗೆ ಪರ್ಯಾಯ ಮಾರ್ಗ ಹುಡುಕುವುದು ಸರ್ಕಾರದ ಆದ್ಯತೆಯಾಗಬೇಕು.

ಅಗತ್ಯ ವಸ್ತುಗಳ ಬೆಲೆ ಏರಿಕೆಯ ಬಗ್ಗೆ ಜನರ ಅಸಮಾಧಾನವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ವಿಶೇಷವಾಗಿ ಬಡವರು, ಕೂಲಿ ಕಾರ್ಮಿಕರು, ರೈತರು, ವಿದ್ಯಾರ್ಥಿಗಳು, ಹಿರಿಯ ನಾಗರಿಕರು ಹಾಗೂ ಸೀಮಿತ ಆದಾಯದ ಕುಟುಂಬಗಳಿಗೆ ವಿಶೇಷ ಪರಿಹಾರ ಕ್ರಮಗಳನ್ನು ರೂಪಿಸುವ ಅಗತ್ಯವಿದೆ.

ಜನಸಾಮಾನ್ಯರ ಪ್ರಶ್ನೆ ಒಂದೇ: ಆದಾಯ ಹೆಚ್ಚಾಗದೆ ಖರ್ಚು ಮಾತ್ರ ಏಕೆ ಹೆಚ್ಚಾಗುತ್ತಿದೆ?

ಇಂದಿನ ಸಾಮಾನ್ಯ ಕುಟುಂಬಗಳ ಮುಂದಿರುವ ಪ್ರಮುಖ ಪ್ರಶ್ನೆ ಇದೇ. ಸಂಬಳದಲ್ಲಿ ನಿರೀಕ್ಷಿತ ಹೆಚ್ಚಳವಿಲ್ಲ, ಉದ್ಯೋಗದ ಭದ್ರತೆ ಎಲ್ಲರಿಗೂ ಇಲ್ಲ, ಆದರೆ ದಿನನಿತ್ಯದ ಅಗತ್ಯಗಳ ಖರ್ಚು ಮಾತ್ರ ನಿರಂತರವಾಗಿ ಹೆಚ್ಚುತ್ತಿದೆ ಎಂಬ ಭಾವನೆ ಸಾರ್ವಜನಿಕರಲ್ಲಿ ಮೂಡಿದೆ. ಹಾಲು ಖರೀದಿಸಬೇಕು, ಮಕ್ಕಳಿಗೆ ಆಹಾರ ಒದಗಿಸಬೇಕು, ದಿನಸಿ ಸಾಮಗ್ರಿಗಳನ್ನು ತರಬೇಕು, ಕೆಲಸಕ್ಕೆ ತೆರಳಲು ಬಸ್ ಪ್ರಯಾಣ ಮಾಡಬೇಕು. ಇವು ಯಾವುದೂ ಐಷಾರಾಮಿ ಖರ್ಚುಗಳಲ್ಲ. ಇವೆಲ್ಲವೂ ಬದುಕಿನ ಅನಿವಾರ್ಯ ಅಗತ್ಯಗಳು. ಇಂತಹ ಅಗತ್ಯಗಳ ಬೆಲೆ ಏರಿಕೆಯಾದಾಗ ಜನರು ತಮ್ಮ ಬದುಕಿನ ಇತರ ಪ್ರಮುಖ ಅವಶ್ಯಕತೆಗಳನ್ನು ಕಡಿತಗೊಳಿಸುವ ಪರಿಸ್ಥಿತಿ ಎದುರಾಗುತ್ತದೆ. ಸರ್ಕಾರಗಳು ಜನರ ಕಲ್ಯಾಣಕ್ಕಾಗಿ ಯೋಜನೆಗಳನ್ನು ಜಾರಿಗೊಳಿಸುವುದರ ಜೊತೆಗೆ ಜನರ ದಿನನಿತ್ಯದ ಬದುಕಿನ ಮೇಲಿನ ಆರ್ಥಿಕ ಹೊರೆಯನ್ನೂ ಗಮನಿಸಬೇಕಾಗಿದೆ.

ಒಂದು ಕಡೆ ಜನಪರ ಯೋಜನೆಗಳು, ಮತ್ತೊಂದು ಕಡೆ ಅಗತ್ಯ ವಸ್ತುಗಳ ಬೆಲೆ ಏರಿಕೆಯ ಸ್ಥಿತಿ ನಿರ್ಮಾಣವಾದರೆ ಸಾಮಾನ್ಯ ಜನರ ನಿರೀಕ್ಷೆಗಳಿಗೆ ಧಕ್ಕೆಯಾಗಬಹುದು.

ಬೆಲೆ ಏರಿಕೆ ಎನ್ನುವುದು ಕೇವಲ ಅಂಕಿ-ಅಂಶಗಳ ಲೆಕ್ಕಾಚಾರವಲ್ಲ :

ಅದು ಒಂದು ಕುಟುಂಬದ ಅಡುಗೆ ಮನೆಯ ಮೇಲೆ, ಮಕ್ಕಳ ಶಿಕ್ಷಣದ ಮೇಲೆ, ಹಿರಿಯರ ಆರೋಗ್ಯದ ಮೇಲೆ, ಉದ್ಯೋಗಿಗಳ ಪ್ರಯಾಣದ ಮೇಲೆ ಹಾಗೂ ಜನರ ಭವಿಷ್ಯದ ಉಳಿತಾಯದ ಮೇಲೆ ನೇರವಾಗಿ ಪರಿಣಾಮ ಬೀರುವ ವಿಚಾರವಾಗಿದೆ. ಹಾಲು, ಮೊಸರು, ಬೇಳೆಕಾಳು, ಸಕ್ಕರೆ, ಅಡುಗೆ ಎಣ್ಣೆಯಂತಹ ಅಗತ್ಯ ವಸ್ತುಗಳ ಬೆಲೆ ಏರಿಕೆ ಹಾಗೂ ಸಾರಿಗೆ ದರ ಹೆಚ್ಚಳದ ಸಾಧ್ಯತೆ ಜನಸಾಮಾನ್ಯರಲ್ಲಿ ಆತಂಕ ಮೂಡಿಸಿರುವುದು ಸಹಜ. ಜನರ ಬದುಕು ಸಹನೀಯ ಎಂದೆನಿಸಲು ಅಗತ್ಯ ವಸ್ತುಗಳ ಬೆಲೆ ಕೈಗೆಟುಕುವಂತಿರಬೇಕು. ಸಾರ್ವಜನಿಕ ಸಾರಿಗೆ ಜನಸ್ನೇಹಿಯಾಗಿರಬೇಕು. ಸರ್ಕಾರದ ಪ್ರತಿಯೊಂದು ಆರ್ಥಿಕ ನಿರ್ಧಾರದಲ್ಲೂ ಜನಸಾಮಾನ್ಯರ ಹಿತಾಸಕ್ತಿಗೆ ಮೊದಲ ಆದ್ಯತೆ ಸಿಗಬೇಕು.

ಜನರ ಆದಾಯಕ್ಕೆ ಅನುಗುಣವಾಗಿ ಜೀವನ ವೆಚ್ಚ ಇರಬೇಕೇ ಹೊರತು, ಜೀವನ ನಡೆಸುವುದೇ ಜನರಿಗೆ ಪ್ರತಿದಿನದ ಹೋರಾಟವಾಗಬಾರದು. ಜನರ ಜೇಬಿಗೆ ಹೊರೆಯಾಗದ ಆಡಳಿತವೇ ನಿಜವಾದ ಜನಪರ ಆಡಳಿತ ಎಂಬುದು ಸಾರ್ವಜನಿಕರ ನಿರೀಕ್ಷೆಯಾಗಿದೆ.

ರೈತರ ಹಿತದ ಹೆಸರಿನಲ್ಲಿ ಜನಸಾಮಾನ್ಯರ ಮೇಲೆ ಬೆಲೆ ಏರಿಕೆಯ ಹೊರೆ ಎಷ್ಟು ಸೂಕ್ತ? ಸರ್ಕಾರಕ್ಕೆ ಪರ್ಯಾಯ ಮಾರ್ಗಗಳೇ ಇಲ್ಲವೇ? ಸರ್ಕಾರದ ಗಮನಕ್ಕೆ ಬರಬೇಕಾದ ಪ್ರಮುಖ ಅಂಶ: ರೈತರು ಮತ್ತು ಗ್ರಾಹಕರು ಪರಸ್ಪರ ವಿರೋಧಿಗಳಲ್ಲ.

ಮಣಿಪುರದಲ್ಲಿ ಮುಂದುವರೆದ ಹಿಂಸಾಚಾರ: ಸತತ 2ನೇ ದಿನ ಕಾಂಗ್ಪೋಕ್ಪಿ ಬಂದ್, ಜನಜೀವನ ಸ್ತಬ್ಧ

ಕಣ್ಮರೆಯಾಗಿದ್ದ ಕುಕಿ ಸಮುದಾಯದ ಇಬ್ಬರು ಯುವಕರ ಮೃತದೇಹಗಳು ಭೀಕರವಾಗಿ ಹತ್ಯೆಯಾದ ಸ್ಥಿತಿಯಲ್ಲಿ ಪತ್ತೆಯಾದ ಬಳಿಕ ಮಣಿಪುರದ ಕಾಂಗ್ಪೋಕ್ಪಿ ಜಿಲ್ಲೆಯಲ್ಲಿ ಉದ್ವಿಗ್ನತೆ ಹೆಚ್ಚಾಗಿದೆ. ಸತತ ಎರಡನೇ ದಿನವೂ ಬಂದ್ ಮುಂದುವರೆದಿದೆ. ಜನಜೀವನ ಸಂಪೂರ್ಣವಾಗಿ ಸ್ತಬ್ದಗೊಂಡಿದೆ.

2023ರಿಂದಲೂ ಮಣಿಪುರದಲ್ಲಿ ಜನಾಂಗೀಯ ಹಿಂಸಾಚಾರ ನಡೆಯುತ್ತಿದೆ. ಆರಂಭದಲ್ಲಿ ಕುಕಿ ಮತ್ತು ಮೈತೇಯಿ ಸಮುದಾಯದ ನಡುವೆ ಹಿಂಸಾಚಾರ ನಡೆದಿದ್ದು 250ಕ್ಕೂ ಅಧಿಕ ಮಂದಿ ಸಾವನ್ನಪ್ಪಿದ್ದಾರೆ. 2026ರಿಂದ ನಾಗಾ ಮತ್ತು ಕುಕಿ ಸಮುದಾಯದ ನಡುವೆ ಹಿಂಸಾಚಾರ ನಡೆಯುತ್ತಿದೆ. ಒಟ್ಟಿನಲ್ಲಿ ಮಣಿಪುರ ನಿರಂತರವಾಗಿ ಬೂದಿ ಮುಚ್ಚಿದ ಕೆಂಡದಂತಿದೆ.

ಕೆಲವು ದಿನಗಳ ಹಿಂದೆ ಕಣ್ಮರೆಯಾಗಿದ್ದ ಇಬ್ಬರು ಯುವಕರ ಮೃತದೇಹಗಳು ನೆರೆಯ ಸೇನಾಪತಿ ಜಿಲ್ಲೆಯ ಗುಡ್ಡಗಾಡು ಪ್ರದೇಶದಲ್ಲಿ ಪತ್ತೆಯಾಗಿದ್ದವು. ಭದ್ರತಾ ಪಡೆಗಳು ಮತ್ತು ಪೊಲೀಸರು ನಡೆಸಿದ ಜಂಟಿ ಶೋಧ ಕಾರ್ಯಾಚರಣೆಯ ವೇಳೆಯಲ್ಲಿ ಈ ದೇಹಗಳು ಸಿಕ್ಕಿದ್ದು, ಯುವಕರನ್ನು ಅಪಹರಿಸಿ ಕೊಲೆ ಮಾಡಲಾಗಿದೆ ಎಂದು ಆರೋಪಿಸಲಾಗಿದೆ. ಮೃತದೇಹಗಳನ್ನು ಕಾಂಗ್ಪೋಕ್ಪಿ ಜಿಲ್ಲಾ ಆಸ್ಪತ್ರೆಗೆ ತರಲಾಗುತ್ತಿದ್ದಂತೆ ಸಾರ್ವಜನಿಕರಲ್ಲಿ ಆಕ್ರೋಶ ಹೆಚ್ಚಾಗಿದೆ.

ಕೊಲೆಯನ್ನು ಖಂಡಿಸಿ ಮತ್ತು ತಪ್ಪಿತಸ್ಥರ ವಿರುದ್ಧ ತಕ್ಷಣದ ಕ್ರಮಕ್ಕೆ ಆಗ್ರಹಿಸಿ ಸ್ಥಳೀಯ ಸಮುದಾಯಿಕ ಸಂಘಟನೆಗಳು ಬಂದ್‌ಗೆ ಕರೆ ನೀಡಿದ್ದು, ಬಂದ್ ಅವಧಿಯನ್ನು ವಿಸ್ತರಿಸಿವೆ. ಅಂಗಡಿ ಮುಂಗಟ್ಟುಗಳು, ವಾಣಿಜ್ಯ ಸಂಸ್ಥೆಗಳು ಮತ್ತು ಶಾಲಾ-ಕಾಲೇಜುಗಳು ಸಂಪೂರ್ಣವಾಗಿ ಬಾಗಿಲು ಮುಚ್ಚಿವೆ. ರಸ್ತೆ ಸಾರಿಗೆ ಸಂಪೂರ್ಣವಾಗಿ ಸ್ಥಗಿತಗೊಂಡಿದ್ದು, ವಾಹನ ಸಂಚಾರವಿಲ್ಲದೆ ಹೆದ್ದಾರಿಗಳು ನಿರ್ಜನಗೊಂಡಿವೆ.

ಯುವಕರ ಹತ್ಯೆಯಿಂದ ಕೆರಳಿದ ಪ್ರತಿಭಟನಾಕಾರರು ರಸ್ತೆಗಿಳಿದು ಧರಣಿ ನಡೆಸಿದ್ದಾರೆ. ಈ ವೇಳೆ ಪೊಲೀಸರು ಮತ್ತು ಭದ್ರತಾ ಸಿಬ್ಬಂದಿಯ ಮೇಲೆ ಕಲ್ಲು ತೂರಾಟ ನಡೆಸಿದ ಘಟನೆಯೂ ನಡೆದಿದೆ. ಪರಿಸ್ಥಿತಿಯನ್ನು ಹತೋಟಿಗೆ ತರಲು ಭದ್ರತಾ ಪಡೆಗಳು ಅಶ್ರುವಾಯು ಮತ್ತು ಲಾಠಿ ಪ್ರಹಾರ ನಡೆಸಿದ್ದು, ಈ ಘರ್ಷಣೆಯಲ್ಲಿ ಒಬ್ಬ ಪ್ರತಿಭಟನಾಕಾರನ ತಲೆಗೆ ಗಾಯವಾಗಿದೆ.

ಸ್ಥಳೀಯ ಬುಡಕಟ್ಟು ಸಂಘಟನೆಗಳು ಈ ಭೀಕರ ಕೊಲೆಯ ತನಿಖೆಯನ್ನು ರಾಷ್ಟ್ರೀಯ ತನಿಖಾ ಸಂಸ್ಥೆಗೆ (ಎನ್‌ಐಎ) ವಹಿಸಬೇಕು ಮತ್ತು ತಪ್ಪಿತಸ್ಥರನ್ನು ತಕ್ಷಣವೇ ಬಂಧಿಸಬೇಕು ಎಂದು ಒತ್ತಾಯಿಸಿವೆ. ಘಟನೆಯನ್ನು ಖಂಡಿಸಿರುವ ಮಣಿಪುರದ ಉಪಮುಖ್ಯಮಂತ್ರಿ ನೇಮ್ಚಾ ಕಿಪ್ಗೆನ್ ಅವರು ಇದೊಂದು ಹೀನ ಕೃತ್ಯ ಎಂದು ಬಣ್ಣಿಸಿದ್ದು, ಶಾಂತಿ ಕಾಪಾಡುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR